ಸಂಪುಟ : 11 ಸಂಚಿಕೆ: 110 ಪುಟ : 4+2 ಬೆಲೆ: 3.00 ಮಂಗಳವಾರ ಜೂನ್ 02 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 110 Pages : 4+2 Price : 3.00 Tuesday june 02 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಶೈಕ್ಷಣಿಕ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಕಾರ್ಯನಿರ್ವಹಿಸುತ್ತಿರುವ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನವಾಗಿದೆ.

ಪಿಯುಸಿ, ಡಿಪ್ಲೊಮಾ ಹಾಗೂ ಐಟಿಐ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮತ್ತು ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾಗಿದೆ.

ಅರ್ಜಿ ಸಲ್ಲಿಸಲು ಇಲಾಖೆಯ ಅಧಿಕೃತ ವೆಬ್‌ಸೈಟ್

[https://shp.karnataka.gov.in/bcwd](https://shp.karnataka.gov.in/bcwd?utm_source=chatgpt.com)

ಮೂಲಕ ಅರ್ಜಿ ಸಲ್ಲಿಸಬಹುದು.

ಹೊಸ ಅರ್ಜಿಗಳ ಪರಿಶೀಲನೆಗೆ ತಾಲೂಕು ಕಲ್ಯಾಣಾಧಿಕಾರಿಗಳಿಗೆ ಜೂನ್ 17 ಅಂತಿಮ ದಿನವಾಗಿದ್ದು, ತಾಲೂಕು ಸಮಿತಿಯ ಮೂಲಕ ಆಯ್ಕೆಯಾದ ವಿದ್ಯಾರ್ಥಿಗಳ ಪಟ್ಟಿಯನ್ನು ಜೂನ್ 19 ರಂದು ಪ್ರಕಟಿಸಲಾಗುತ್ತದೆ. ಆಯ್ಕೆಯಾದ ವಿದ್ಯಾರ್ಥಿಗಳು ಜೂನ್ 25 ರಂದು ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಪಡೆಯಬಹುದು.

ಹೆಚ್ಚಿನ ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಚೇರಿಯನ್ನು ಸಂಪರ್ಕಿಸುವಂತೆ ಇಲಾಖೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಘು–ಭಾರಿ ವಾಹನ ಚಾಲನೆಗೆ ಉಚಿತ ತರಬೇತಿ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಸರ್ಕಾರದ ಎಸ್‌ಸಿ.ಎಸ್‌ಪಿ/ಟಿಎಸ್‌ಪಿ ಯೋಜನೆಯಡಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ–ಯುವತಿಯರಿಗೆ ಲಘು ಹಾಗೂ ಭಾರಿ ವಾಹನ ಚಾಲನಾ ಉಚಿತ ತರಬೇತಿ ಕಾರ್ಯಕ್ರಮ ಆರಂಭಿಸಲಾಗಿದೆ.

ವಾಕರಸಾ ಸಂಸ್ಥೆಯ ಹುಬ್ಬಳ್ಳಿ ಹಾಗೂ ಶಿಗ್ಗಾವಿ ತರಬೇತಿ ಕೇಂದ್ರಗಳಲ್ಲಿ ನಡೆಯುವ ಈ ತರಬೇತಿ 30 ದಿನಗಳ ಅವಧಿಯದ್ದಾಗಿದ್ದು, ತರಬೇತಿ ಅವಧಿಯಲ್ಲಿ ಊಟ, ಉಪಹಾರ ಹಾಗೂ ವಸತಿ ಸೌಲಭ್ಯವನ್ನು ಉಚಿತವಾಗಿ ಒದಗಿಸಲಾಗುತ್ತದೆ. ಜೊತೆಗೆ ಚಾಲನಾ ಪರವಾನಿಗೆ ಪತ್ರದ ವ್ಯವಸ್ಥೆಯನ್ನೂ ಮಾಡಲಾಗುತ್ತದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ನಿರುದ್ಯೋಗಿ ಯುವಕ–ಯುವತಿಯರು ಈ ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ಸಮಾಜ ಕಲ್ಯಾಣ ಇಲಾಖೆ ಮನವಿ ಮಾಡಿದೆ.

ಹೆಚ್ಚಿನ ಮಾಹಿತಿಗಾಗಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರ, ಹುಬ್ಬಳ್ಳಿಯನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜೂ. 14ರಂದು ರಾಜ್ಯ ಮಟ್ಟದ ಗಾಣಿಗ ಸಮಾಜದ ವಧು-ವರರ ಮಹಾ ಸಮಾವೇಶ

■ವಿಜಯಸಾಕ್ಷಿ ಸುದ್ದಿ, ಗದಗ



ಅಖಿಲ ಭಾರತ ಗಾಣಿಗ ವಿದ್ಯಾ ಹಾಗೂ ಉದ್ಯೋಗವರ್ಧಕ ಟ್ರಸ್ಟ್ ವತಿಯಿಂದ ಜಿಲ್ಲೆಯ ಎಲ್ಲಾ ತಾಲೂಕಿನ ಸಮಾಜ ಬಾಂಧವರ ಸಹಕಾರದೊಂದಿಗೆ ರಾಜ್ಯ ಮಟ್ಟದ ವಧು–ವರರ ಉಚಿತ ಸಮಾವೇಶವನ್ನು ಜೂನ್ 14, 2026ರಂದು ಬೆಳಿಗ್ಗೆ 9 ಗಂಟೆಗೆ ನಗರದ ಗಾಣಿಗ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಗದಗ ಜಿಲ್ಲಾ ಗಾಣಿಗ ಸಂಘವು ಹಲವು ವರ್ಷಗಳಿಂದ ಸಮಾಜಮುಖಿ ಹಾಗೂ ರಚನಾತ್ಮಕ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಆಯೋಜಿಸುತ್ತಿದ್ದು, ಈಗಾಗಲೇ ಅನೇಕ ರಾಜ್ಯ ಮಟ್ಟದ ವಧು–ವರರ ಸಮಾವೇಶಗಳನ್ನು ವ್ಯವಸ್ಥಿತವಾಗಿ ನಡೆಸಿಕೊಟ್ಟಿದೆ. ಇಂದಿನ ಸಾಮಾಜಿಕ ಪರಿಸ್ಥಿತಿಯಲ್ಲಿ ವಧು–ವರರ ಸಮಾವೇಶಗಳು ಸಮಾಜ ಬಾಂಧವರಿಗೆ ಅತ್ಯಂತ ಉಪಯುಕ್ತವಾಗಿದ್ದು, ಯುವಜನರ ಭವಿಷ್ಯ ರೂಪಿಸುವ ಸೇತುವೆಯಾಗಿ ಪರಿಣಮಿಸಿವೆ ಎಂದು ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ. ಸಮಾವೇಶದಲ್ಲಿ ಭಾಗವಹಿಸಲು ಇಚ್ಛಿಸುವ ಗಾಣಿಗ ಸಮಾಜದ ವಧು–ವರರು ಜೂನ್ 10, 2026ರೊಳಗಾಗಿ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ, ಆಧಾರ್ ಕಾರ್ಡ್ ಹಾಗೂ ಬಯೋಡೇಟಾ ಸಹಿತ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ. ಸಮಾವೇಶದಲ್ಲಿ ಭಾಗವಹಿಸುವ ಪ್ರತಿಯೊಬ್ಬ ವಧು–ವರರೊಂದಿಗೆ ಇಬ್ಬರಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 9741648546, 9591066921, 9880369245, 9448103739 ಸಂಪರ್ಕಿಸಬಹುದು ಎಂದು ಟ್ರಸ್ಟ್ ಅಧ್ಯಕ್ಷ ಬಸವರಾಜ ಬಿಂಗಿ ಹಾಗೂ ಕಾರ್ಯದರ್ಶಿ ಮುರುಗೇಶ ಬಡ್ನಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಸುಂಡಿಯಲ್ಲಿ ಸಂಭ್ರಮದ ಶಾಲಾರಂಭೋತ್ಸವ ಪುಷ್ಪವೃಷ್ಟಿ, ಮೆರವಣಿಗೆ, ಹೊಸ ಪುಸ್ತಕಗಳ ಖುಷಿಯಿಂದ ಕಂಗೊಳಿಸಿದ ಸರ್ಕಾರಿ ಶಾಲೆ

# ಎತ್ತಿನಗಾಡಿಯಲ್ಲಿ ಮಕ್ಕಳ ಶಾಲಾ ಸಂಭ್ರಮ!

■ವಿಜಯಸಾಕ್ಷಿ ಸುದ್ದಿ, ಗದಗ

ಹೊಸ ಶೈಕ್ಷಣಿಕ ವರ್ಷದ ಮೊದಲ ದಿನವೇ ಮಕ್ಕಳಲ್ಲಿ ಶಾಲೆಯ ಬಗ್ಗೆ ಪ್ರೀತಿ, ಉತ್ಸಾಹ ಮತ್ತು ಆತ್ಮೀಯತೆ ಮೂಡಿಸುವ ಉದ್ದೇಶದಿಂದ ಗದಗ ತಾಲೂಕಿನ ಅಸುಂಡಿಯ ಕುವೆಂಪು ಶತಮಾನೋತ್ಸವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶಾಲಾರಂಭೋತ್ಸವವನ್ನು ಅದ್ದೂರಿಯಾಗಿ ಹಾಗೂ ವಿಶಿಷ್ಟವಾಗಿ ಆಚರಿಸಲಾಯಿತು.

ಕಾರ್ಯಕ್ರಮಕ್ಕೂ ಮುನ್ನ ಗ್ರಾಮದ ಪ್ರಮುಖ ಬೀದಿಗಳಲ್ಲಿ ವಿದ್ಯಾರ್ಥಿಗಳ ಭವ್ಯ ಮೆರವಣಿಗೆ ನಡೆಯಿತು. ಎತ್ತಿನಗಾಡಿ ಹಾಗೂ ಟ್ರ್ಯಾಕ್ಟರ್‌ಗಳಲ್ಲಿ ಮಕ್ಕಳನ್ನು ಕೂರಿಸಿಕೊಂಡು ಗ್ರಾಮದಲ್ಲಿ ಮೆರವಣಿಗೆ ನಡೆಸಿ ಶಾಲೆಗೆ ಕರೆತರಲಾಯಿತು. ಮೆರವಣಿಗೆಯುದ್ದಕ್ಕೂ ಗ್ರಾಮಸ್ಥರು ಹರ್ಷೋದ್ಗಾರಗಳೊಂದಿಗೆ ಮಕ್ಕಳನ್ನು ಸ್ವಾಗತಿಸಿದರು.

ಶಾಲೆಯ ಮುಖ್ಯ ದ್ವಾರದಲ್ಲಿ ಅತಿಥಿಗಳು ಹಾಗೂ ಶಿಕ್ಷಕರು ಮಕ್ಕಳ ಮೇಲೆ ಪುಷ್ಪವೃಷ್ಟಿ ಮಾಡುವ ಮೂಲಕ ಆತ್ಮೀಯವಾಗಿ ಬರಮಾಡಿಕೊಂಡರು. ವಿಶೇಷವಾಗಿ

> "ಶಾಲೆಯ ಮೊದಲ ದಿನ ಮಕ್ಕಳ ಮುಖದಲ್ಲಿ ಮೂಡುವ ಸಂತಸವೇ ವರ್ಷಪೂರ್ತಿ ಕಲಿಕೆಯ ಉತ್ಸಾಹಕ್ಕೆ ಅಡಿಪಾಯವಾಗುತ್ತದೆ."
> – ಆರ್.ಎಸ್. ಬುರಡಿ, ಉಪನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ



ನಿರ್ಮಿಸಲಾಗಿದ್ದ ಸೆಲ್ಫಿ ಕಾರ್ನರ್ ವಿದ್ಯಾರ್ಥಿಗಳು ಮತ್ತು ಪಾಲಕರ ಗಮನ ಸೆಳೆಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್. ಎಸ್. ಬುರಡಿ ಮಾತನಾಡಿ, "ಶಿಕ್ಷಣವು ಪ್ರತಿಯೊಬ್ಬ ಮಗುವಿನ ಮೂಲಭೂತ ಹಕ್ಕು. ಮಕ್ಕಳಿಗೆ ಸುರಕ್ಷಿತ, ಸಂತೋಷದಾಯಕ ಹಾಗೂ ಪ್ರೇರಣಾದಾಯಕ ವಾತಾವರಣದಲ್ಲಿ ಶಿಕ್ಷಣ ದೊರೆಯಬೇಕು" ಎಂದು ಹೇಳಿದರು.

"ಶಾಲೆಯ ಮೊದಲ ದಿನವೇ ಮಕ್ಕಳಲ್ಲಿ ಶಾಲೆಯ ಬಗ್ಗೆ ಪ್ರೀತಿ ಮತ್ತು ಆತ್ಮೀಯತೆ ಮೂಡಬೇಕು. ಅದಕ್ಕಾಗಿ ಶಿಕ್ಷಕರು, ಪಾಲಕರು ಹಾಗೂ ಶಾಲಾಭಿವೃದ್ಧಿ ಸಮಿತಿ ಸದಸ್ಯರು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಬೇಕು" ಎಂದು ಹೇಳಿದರು.

ಸರ್ಕಾರಿ ಶಾಲೆಗಳಲ್ಲಿ ಆಧುನಿಕ ಕಲಿಕಾ ಸೌಲಭ್ಯಗಳು, ಗುಣಮಟ್ಟದ ಶಿಕ್ಷಕರು, ಉಚಿತ ಪಠ್ಯಪುಸ್ತಕ, ಸಮವಸ್ತ್ರ

#### ಹೊಸ ಪುಸ್ತಕ-ಸಮವಸ್ತ್ರ ಪಡೆದು ಖುಷಿಯಾದ ಮಕ್ಕಳು

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಪಠ್ಯಪುಸ್ತಕಗಳು ಹಾಗೂ ಸಮವಸ್ತ್ರಗಳನ್ನು ವಿತರಿಸಲಾಯಿತು. ಹೊಸ ಪುಸ್ತಕ ಹಾಗೂ ಸಮವಸ್ತ್ರ ಪಡೆದ ಮಕ್ಕಳ ಮುಖದಲ್ಲಿ ಸಂತಸ ಮನೆ ಮಾಡಿತ್ತು.

ಅಸುಂಡಿ ಶಾಲಾ ಮಕ್ಕಳಿಂದ ನಾಡಗೀತೆ ಪ್ರಸ್ತುತಪಡಿಸಲಾಯಿತು. ಮಲ್ಲಸಮುದ್ರ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳ ತಂಡದಿಂದ ನೃತ್ಯ ಪ್ರದರ್ಶನ ನಡೆಯಿತು.

ಹಾಗೂ ಮಧ್ಯಾಹ್ನದ ಬಿಸಿಯೂಟ ಸೇರಿದಂತೆ ವಿದ್ಯಾರ್ಥಿ ಸ್ನೇಹಿ ವ್ಯವಸ್ಥೆಗಳು ಲಭ್ಯವಿವೆ. ಗ್ರಾಮೀಣ ವಿದ್ಯಾರ್ಥಿಗಳೂ ಜಾಗತಿಕ ಮಟ್ಟದಲ್ಲಿ ಸ್ಪರ್ಧಿಸುವ ಸಾಮರ್ಥ್ಯ ಹೊಂದುವಂತೆ ಶಿಕ್ಷಣ ನೀಡಲಾಗುತ್ತಿದೆ ಎಂದು ತಿಳಿಸಿದರು.

ಶಿಕ್ಷಣದ ಮಹತ್ವವನ್ನು ವಿಶಿಷ್ಟವಾಗಿ ವಿವರಿಸಿದ ಅವರು, "ಶಿಕ್ಷಣ ಕೊತ್ತಂಬರಿ ಸೊಪ್ಪಿನಂತಿದ್ದು, ಅದು ಎಲ್ಲೆ ಇದ್ದರೂ ತನ್ನ ಸುವಾಸನೆ ಹರಡುತ್ತದೆ. ಮಕ್ಕಳು ತಾವು ಓದುತ್ತಿರುವ ಶಾಲೆಯನ್ನು ಹೆಮ್ಮೆಯಿಂದ ಕಾಣಬೇಕು" ಎಂದು ಕರೆ ನೀಡಿದರು.

▸▸ 4ನೇ ಪುಟಕ್ಕೆ

### ಬಸವಾದಿ ಶಿವಶರಣರ ಬೃಹತ್ ಹಿಂದೂ ಸಮಾವೇಶ– ಸಾವಿರಾರು ಜನರ ಸಮ್ಮುಖದಲ್ಲಿ ಕನೇರಿ ಶ್ರೀಗಳ ಕರೆ

# ಧರ್ಮ ಒಡೆಯುವ ಶಕ್ತಿಗಳ ವಿರುದ್ಧ ಹಿಂದೂ ಸಮಾಜ ಜಾಗೃತವಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಬಸವಾದಿ ಶಿವಶರಣರು ಯಾವುದೇ ಒಂದು ಜಾತಿ ಅಥವಾ ಚೌಕಟ್ಟಿಗೆ ಸೀಮಿತರಾದವರಲ್ಲ. ಇಡೀ ಹಿಂದೂ ಧರ್ಮವನ್ನು ಶುದ್ಧೀಕರಣಗೊಳಿಸಿದ ಮಹಾಪುರುಷರು ಎಂದು ಕೊಲ್ಹಾಪುರದ ಕನೇರಿ ಮಠದ ಕಾಡಸಿದ್ಧೇಶ್ವರ ಸ್ವಾಮೀಜಿ ಹೇಳಿದರು.

ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ಹಿಂದೂ ಸರ್ವ ಸಮಾಜಗಳ ಒಕ್ಕೂಟದ ಆಶ್ರಯದಲ್ಲಿ ಭಾನುವಾರ ನಡೆದ "ಬಸವಾದಿ ಶಿವಶರಣರ ಬೃಹತ್ ಹಿಂದೂ ಸಮಾವೇಶದಲ್ಲಿ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

> "ಬಸವ ತತ್ವವನ್ನು ವಿಭಜನೆಯ ಸಾಧನವಾಗಿಸದೆ, ಸಮಾಜದ ಏಕತೆಗೆ ಬಳಸಬೇಕಾಗಿದೆ."
> – ಕಾಡಸಿದ್ದೇಶ್ವರ ಸ್ವಾಮೀಜಿ, ಕನೇರಿ ಮಠ



"ಕಾರ್ಲ್ ಮಾರ್ಕ್ಸ್ ಸಿದ್ಧಾಂತದ ಅನುಯಾಯಿಗಳು ಇಂದು ಬಸವಣ್ಣನವರ ಹೆಸರಿನಲ್ಲಿ ಇತಿಹಾಸ ತಿರುಚುವ ಕೆಲಸ ಮಾಡುತ್ತಿದ್ದಾರೆ. ಒಂದೇ ಸುಳ್ಳನ್ನು ನೂರು ಬಾರಿ ಹೇಳಿ ಸತ್ಯವನ್ನಾಗಿ ಮಾಡಲು ಹೊರಟಿರುವ ಇಂತಹ ಶಕ್ತಿಗಳ ವಿರುದ್ಧ ಹಿಂದೂ ಸಮಾಜ ಜಾಗೃತವಾಗಬೇಕು" ಎಂದು ಕರೆ ನೀಡಿದರು.

"ಬಸವಣ್ಣನವರು ವೇದ, ಆಗಮ, ಪುರಾಣಗಳನ್ನು ಸಂಪೂರ್ಣ ತಿರಸ್ಕರಿಸಿದ್ದರು ಎಂಬುದು ತಪ್ಪು ಪ್ರಚಾರ. ಶರಣರ ವಚನಗಳಲ್ಲೇ ವೇದ–ಆಗಮಗಳ ಉಲ್ಲೇಖಗಳಿವೆ. ಬಸವಣ್ಣನವರು 'ದೇವನೊಬ್ಬ ನಾಮ ಹಲವು' ಎಂದು ಸಾರಿದವರು" ಎಂದು ಹೇಳಿದರು.

"ಸಮಗಾರ ಹರಳಯ್ಯ, ಹಡಪದ ಅಪ್ಪಣ್ಣ ಅವರ ಸಮಾಜದವರು ಇನ್ನೂ ಸಾಮಾಜಿಕವಾಗಿ ಹಿಂದುಳಿದಿರುವುದು ನೋವಿನ ಸಂಗತಿ. ಬಸವ ತತ್ವಗಳನ್ನು ಕೇವಲ ಭಾಷಣಕ್ಕೆ ಸೀಮಿತಗೊಳಿಸದೆ ಜೀವನದಲ್ಲಿ ಅಳವಡಿಸಿಕೊಳ್ಳಬೇಕು" ಎಂದು ತಿಳಿಸಿದರು.

#### ಮೆರವಣಿಗೆಯಲ್ಲಿ ಮಹಿಳೆಯರ ಕುಂಭ ಮೆರಗು

ಸಮಾವೇಶಕ್ಕೂ ಮುನ್ನ ಭೂಮರೆಡ್ಡಿ ವೃತ್ತದಿಂದ ವಿದ್ಯಾದಾನ ಸಮಿತಿ ಮೈದಾನವರೆಗೆ ಬೃಹತ್ ಮೆರವಣಿಗೆ ನಡೆಯಿತು. ಸಾವಿರಾರು ಮಹಿಳೆಯರು ಕುಂಭ ಹೊತ್ತು ಸಾಗಿದ್ದು ವಿಶೇಷ ಗಮನ ಸೆಳೆಯಿತು.

ಅನೇಕ ಜಾನಪದ ಕಲಾತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಿದ್ದವು. 100ಕ್ಕೂ ಹೆಚ್ಚು ಮಠಾಧೀಶರು ಮೆರವಣಿಗೆಯಲ್ಲಿ ಹೆಜ್ಜೆ ಹಾಕಿದರು.

ಇಂದು ಒಂದೇ ಕುಟುಂಬದವರು ಒಟ್ಟಾಗಿ ಬದುಕುವುದು ಕಷ್ಟವಾಗಿರುವ ಸಂದರ್ಭದಲ್ಲಿ ಗದಗ ಜಿಲ್ಲೆಯ 64 ಸಮಾಜಗಳು ಒಂದಾಗಿ ಸಮಾವೇಶ ನಡೆಸಿರುವುದು ದೇಶಕ್ಕೇ ಮಾದರಿಯಾಗಿದೆ ಎಂದು ಶ್ರೀಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ರೈತರ ಸ್ಥಿತಿಗತಿಗಳ ಕುರಿತು ಮಾತನಾಡಿದ ಶ್ರೀಗಳು, "ಕೊರೋನಾ ಕಾಲದಲ್ಲೂ,

▸▸ 3ನೇ ಪುಟಕ್ಕೆ

### ನಾಲ್ಕು ಬಾರಿ ಶಾಸಕರಾದ ಜಾತ್ಯಾತೀತ ನಾಯಕನಿಗೆ ಸಂಪುಟದಲ್ಲಿ ಸ್ಥಾನ ಕಲ್ಪಿಸಲು ಕಾಂಗ್ರೆಸ್ ಮುಖಂಡರ ಆಗ್ರಹ

# ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ರೋಣ ಮತಕ್ಷೇತ್ರದ ಶಾಸಕ ಹಾಗೂ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಜಾತ್ಯಾತೀತ ನಾಯಕ ಜಿ.ಎಸ್. ಪಾಟೀಲ ಅವರಿಗೆ ನೂತನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂದು ನರೇಗಲ್ಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಪ್ಪ ಬೆಟಗೇರಿ ಆಗ್ರಹಿಸಿದರು.

ಪಟ್ಟಣದಲ್ಲಿ ಸೋಮವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, "ಜಿ.ಎಸ್. ಪಾಟೀಲ ಅವರು ಕಳೆದ ನಾಲ್ಕೂವರೆ ದಶಕಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಪಕ್ಷ ಸಂಘಟನೆಗೆ ತಮ್ಮನ್ನು ಸಮರ್ಪಿಸಿಕೊಂಡಿದ್ದಾರೆ" ಎಂದು ಹೇಳಿದರು.

"ಹೈಕಮಾಂಡ್ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿಕೊಂಡು ಬಂದಿರುವ ಅವರ ಪಕ್ಷನಿಷ್ಠೆ, ಕ್ಷೇತ್ರದ ಅಭಿವೃದ್ಧಿ ಕಾರ್ಯಗಳು ಹಾಗೂ ಜನಪರ ಕಾರ್ಯವೈಖರಿಯನ್ನು ಪರಿಗಣಿಸಿ ಈ ಬಾರಿ ಸಚಿವ ಸ್ಥಾನ ನೀಡಬೇಕು" ಎಂದು ಒತ್ತಾಯಿಸಿದರು.



**"ಈ ಬಾರಿಯೂ ಅವಕಾಶ ತಪ್ಪಿದರೆ ಹೋರಾಟ"**

"ಪ್ರತಿ ಬಾರಿ ಸಚಿವ ಸ್ಥಾನದಿಂದ ವಂಚಿತರಾಗುತ್ತಿರುವುದು ಕಾರ್ಯಕರ್ತರಲ್ಲಿ ಅಸಮಾಧಾನ ಮೂಡಿಸಿದೆ. ಈ ಬಾರಿಯೂ ಸಚಿವ ಸ್ಥಾನ ಕೈತಪ್ಪಿದರೆ ಕಾರ್ಯಕರ್ತರು ಹೋರಾಟಕ್ಕೆ ಇಳಿಯಬೇಕಾಗುತ್ತದೆ" ಎಂದು ಶರಣಪ್ಪ ಬೆಟಗೇರಿ ಎಚ್ಚರಿಸಿದರು.

**"ಐವತ್ತು ವರ್ಷಗಳ ಬಳಿಕ ಅವಕಾಶ"**

ಮುಖಂಡ ಅಲ್ಲಾಬಕ್ಷಿ ನದಾಫ್ ಮಾತನಾಡಿ, "ಕಾಂಗ್ರೆಸ್ ಪಕ್ಷದಿಂದ ದೊಡ್ಡಮೇಟಿ ಅವರನ್ನು ಹೊರತುಪಡಿಸಿದರೆ ಕಳೆದ ಐವತ್ತು ವರ್ಷಗಳಲ್ಲಿ ಜಿಲ್ಲೆಯ ಬೇರೆ ಯಾರಿಗೂ ಸಚಿವ ಸ್ಥಾನ ಸಿಕ್ಕಿಲ್ಲ. ಈ ಬಾರಿ ಆ ಅವಕಾಶ ಜಿ.ಎಸ್. ಪಾಟೀಲರಿಗೆ ದೊರಕಬೇಕು" ಎಂದು ಹೇಳಿದರು.

> "ಪಕ್ಷನಿಷ್ಠೆ, ಅಭಿವೃದ್ಧಿ ಕಾರ್ಯ ಹಾಗೂ ಜನಪರ ರಾಜಕಾರಣಕ್ಕೆ ಈ ಬಾರಿ ಸಚಿವ ಸ್ಥಾನ ರೂಪದಲ್ಲಿ ನ್ಯಾಯ ಸಿಗಬೇಕು."
> – ಶರಣಪ್ಪ ಬೆಟಗೇರಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ

"ಗದಗ ಜಿಲ್ಲೆಯ ಹಿರಿಯ ರಾಜಕಾರಣಿಯಾಗಿರುವ, ನಾಲ್ಕು ಬಾರಿ ಶಾಸಕರಾಗಿರುವ ಜಿ.ಎಸ್. ಪಾಟೀಲರಿಗೆ ಪದೇಪದೇ ಸಚಿವ ಸ್ಥಾನ ಕೈತಪ್ಪುತ್ತಿರುವುದು ಕಾರ್ಯಕರ್ತರಲ್ಲಿ ಬೇಸರ ಮೂಡಿಸಿದೆ" ಎಂದರು.

▸▸ 4ನೇ ಪುಟಕ್ಕೆ

### ಗದಗ ಹಿಂದೂ ಸಮಾವೇಶದಲ್ಲಿ ದ್ವೇಷ ಭಾಷಣ ಆರೋಪ–ಜಿಲ್ಲಾಡಳಿತ, ಪೊಲೀಸ್ ಇಲಾಖೆಗೆ ದಲಿತ ಸಂಘಟನೆಗಳ ಒಕ್ಕೂಟ ತೀವ್ರ ಆಗ್ರಹ

# ಕನ್ನೇರಿ ಸ್ವಾಮೀಜಿಯ ವಿರುದ್ಧ ಸುಮೋಟೊ ಪ್ರಕರಣ ದಾಖಲಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗದಲ್ಲಿ ನಡೆದ ಹಿಂದೂ ಸಮಾವೇಶದಲ್ಲಿ ಪ್ರಚೋದನಕಾರಿ ಹಾಗೂ ಅವಹೇಳನಕಾರಿ ಭಾಷಣ ಮಾಡಿದ್ದಾರೆ ಎಂದು ಆರೋಪಿಸಿ ಕನ್ನೇರಿ ಸ್ವಾಮೀಜಿಯ ವಿರುದ್ಧ ಸ್ವಯಂಪ್ರೇರಿತ ಸುಮೋಟೊ ಪ್ರಕರಣ ದಾಖಲಿಸಬೇಕೆಂದು ಗದಗ ದಲಿತ ಸಂಘಟನೆಗಳ ಒಕ್ಕೂಟ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯನ್ನು ಆಗ್ರಹಿಸಿದೆ. ಒಕ್ಕೂಟದ ಮುಖಂಡ ಮುತ್ತು ಬಿಳೆಯಲಿ ಪ್ರಕಟಣೆ ಮೂಲಕ ಈ ಆಗ್ರಹ



ವ್ಯಕ್ತಪಡಿಸಿದ್ದು, "ಈ ಹಿಂದೆ ವಿಜಯಪುರ ಜಿಲ್ಲೆಯಲ್ಲಿ ಶಾಂತಿ ಮತ್ತು ಸೌಹಾರ್ದತೆ ಕಾಪಾಡುವ ಉದ್ದೇಶದಿಂದ ಕನ್ನೇರಿ ಸ್ವಾಮೀಜಿಯ ಪ್ರವೇಶಕ್ಕೆ ಜಿಲ್ಲಾಡಳಿತ ನಿರ್ಬಂಧ

> "ಸೌಹಾರ್ದತೆ ಹಾಳು ಮಾಡುವ ಯಾವುದೇ ದ್ವೇಷ ಭಾಷಣವನ್ನು ಸಮಾಜ ಸಹಿಸುವುದಿಲ್ಲ; ಕಾನೂನು ತನ್ನ ಕೆಲಸ ಮಾಡಬೇಕು."
> – ಮುತ್ತು ಬಿಳೆಯಲಿ, ಗದಗ ದಲಿತ ಸಂಘಟನೆಗಳ ಒಕ್ಕೂಟ

ಹೇರಿತ್ತು. ಆ ಆದೇಶವನ್ನು ಪ್ರಶ್ನಿಸಿ ಅವರು ಹೈಕೋರ್ಟ್ ಹಾಗೂ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು" ಎಂದು ತಿಳಿಸಿದ್ದಾರೆ. ಸುಪ್ರೀಂ ಕೋರ್ಟ್ ಸಾರ್ವಜನಿಕ ಭಾಷಣದಲ್ಲಿ ಮಿತಭಾಷೆ ಪಾಲಿಸಬೇಕು ಹಾಗೂ ಯಾವುದೇ ಸಮುದಾಯದ ವಿರುದ್ಧ ಅವಹೇಳನಕಾರಿ ಮಾತುಗಳನ್ನು ಆಡಬಾರದು ಎಂದು ಸೂಚಿಸಿದ್ದರೂ, ಗದಗದಲ್ಲಿ ನಡೆದ ಸಮಾವೇಶದಲ್ಲಿ

▸▸ 3ನೇ ಪುಟಕ್ಕೆ

#### ಕಾನೂನು ಕ್ರಮಕ್ಕೆ ಒತ್ತಾಯ

"ಗದಗ ಜಿಲ್ಲೆಯ ಕೋಮು ಸೌಹಾರ್ದತೆಗೆ ಧಕ್ಕೆ ತರುವ ರೀತಿಯಲ್ಲಿ ದ್ವೇಷ ಭಾಷಣ ಮಾಡಿದ ಆರೋಪದಡಿ ಕನ್ನೇರಿ ಸ್ವಾಮೀಜಿಯ ವಿರುದ್ಧ ತಕ್ಷಣ ಸುಮೋಟೊ ಪ್ರಕರಣ ದಾಖಲಿಸಿ ಕಾನೂನು ಕ್ರಮ ಜರುಗಿಸಬೇಕು" ಎಂದು ಗದಗ ದಲಿತ ಸಂಘಟನೆಗಳ ಒಕ್ಕೂಟ ಆಗ್ರಹಿಸಿದೆ.

**ಬಿಎಲ್‌ಓ ಮೇಲ್ವಿಚಾರಕರಿಗೆ ತರಬೇತಿ–ಮನೆಮನೆ ಸಮೀಕ್ಷೆಗೆ ನಂದಾ ಹಣಬರಟ್ಟಿ ಸೂಚನೆ**

## ಜೂ. 16ರೊಳಗೆ ಮತದಾರರ ಪಟ್ಟಿ ಪರಿಷ್ಕರಣೆ ಪೂರ್ಣಗೊಳಿಸಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಪ್ರಗತಿಯಲ್ಲಿದ್ದು, ಜೂನ್ 16ರೊಳಗೆ ಪೂರ್ಣಗೊಳಿಸಬೇಕೆಂದು ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಮತದಾರರ ನೋಂದಣಾಧಿಕಾರಿ ಹಾಗೂ ಜಿಲ್ಲಾ ಉಪನಿರ್ದೇಶಕಿ ನಂದಾ ಹಣಬರಟ್ಟಿ ಸೂಚಿಸಿದರು.

ಸೋಮವಾರ ತಹಸೀಲ್ದಾರ್ ಕಚೇರಿಯಲ್ಲಿ ಮತದಾರರ ಸಂಕ್ಷಿಪ್ತ ಪರಿಷ್ಕರಣೆ–2006ರ ಕುರಿತು ಬಿಎಲ್‌ಓ ಮೇಲ್ವಿಚಾರಕರಿಗೆ ಆಯೋಜಿಸಿದ್ದ ತರಬೇತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮತಕ್ಷೇತ್ರ ವ್ಯಾಪ್ತಿಯಲ್ಲಿ ಈಗಾಗಲೇ ಶೇ.92ರಷ್ಟು ಮ್ಯಾಪಿಂಗ್ ಕಾರ್ಯ ಪೂರ್ಣಗೊಂಡಿದ್ದು, ಬಾಕಿ ಉಳಿದಿರುವ ಕಾರ್ಯವನ್ನು ಕೂಡ ನಿಗದಿತ ಅವಧಿಯೊಳಗೆ ಪೂರ್ಣಗೊಳಿಸಬೇಕು ಎಂದು ತಿಳಿಸಿದರು.

“88 ಮಂದಿ ಮೇಲ್ವಿಚಾರಕರಿಗೆ ಎರಡು ಹಂತಗಳಲ್ಲಿ ತರಬೇತಿ ನೀಡಲಾಗುತ್ತಿದೆ. ಪ್ರತಿಯೊಬ್ಬ ಮತಗಟ್ಟೆ ಮಟ್ಟದ ಅಧಿಕಾರಿ ಮನೆಮನೆ ಸಮೀಕ್ಷೆ ನಡೆಸಿ ಮತದಾರರ ಮಾಹಿತಿಯನ್ನು ಸಂಗ್ರಹಿಸಬೇಕು. ಎನ್ಯೂಮರೇಶನ್ ಫಾರ್ಮ್‌ನಲ್ಲಿ ದಾಖಲಾದ ಮಾಹಿತಿಯನ್ನು ಮೊಬೈಲ್ ಆಪ್‌ನಲ್ಲಿ ಮ್ಯಾಪಿಂಗ್ ಮಾಡಿ ಖಚಿತಪಡಿಸಿಕೊಂಡು ಮತದಾರರ ಪಟ್ಟಿಗೆ ಸೇರ್ಪಡೆಗೊಳಿಸಬೇಕು” ಎಂದು ಅವರು ಸೂಚಿಸಿದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ್ ಕೆ. ರಾಘವೇಂದ್ರ ರಾವ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಗೋಪಾಲ ನಾಯ್ಕ, ಶಿರಸ್ತೇದಾರ ಎಸ್.ಎಸ್. ಅಸ್ಕಿ, ಪ್ರವೀಣ ಮೊಹರೇಕರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> “ಪ್ರತಿಯೊಬ್ಬ ಅರ್ಹ ಮತದಾರರ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗುವಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು.”
> – **ನಂದಾ ಹಣಬರಟ್ಟಿ,** ಮತದಾರರ ನೋಂದಣಾಧಿಕಾರಿ

**24 ವರ್ಷಗಳ ಬಳಿಕ ಒಂದಾದ ಹಳೆಯ ವಿದ್ಯಾರ್ಥಿನಿಯರು– ಕಣ್ಣೀರಿನ ನಡುವೆ ಗುರುಗಳಿಗೆ ಗುರುವಂದನೆ!**

# ಗುರುಗಳಿಲ್ಲದೆ ನಮ್ಮ ಬದುಕೇ ಅಪೂರ್ಣ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬದುಕಿಗೆ ದಾರಿದೀಪವಾಗಿದ್ದ ಗುರುಗಳನ್ನು ನೆನೆದು ಕಣ್ಣೀರಿಟ್ಟ ಕ್ಷಣ ಶಾಲೆಯ ಮೆಟ್ಟಿಲು, ತರಗತಿ ಕೊಠಡಿ ಮತ್ತು ಬಾಲ್ಯದ ನೆನಪುಗಳನ್ನು ಮತ್ತೆ ಜೀವಂತಗೊಳಿಸಿದ ಅಪರೂಪದ ಮಿಲನ ನರೇಗಲ್ಲ ಪಟ್ಟಣದ ಶ್ರೀ ಅನ್ನದಾನೇಶ್ವರ ಶಿವಾನುಭವ ಮಂಟಪದಲ್ಲಿ ನಡೆದ “ಗುರುವಂದನೆ ಹಾಗೂ ಸ್ನೇಹ ಸ್ಪಂದನ” ಕಾರ್ಯಕ್ರಮ ಹಳೆಯ ವಿದ್ಯಾರ್ಥಿನಿಯರ ಭಾವನಾತ್ಮಕ ಸಂಗಮಕ್ಕೆ ಸಾಕ್ಷಿಯಾಯಿತು.

ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆಯ 2001 ಹಾಗೂ 2002ನೇ ಸಾಲಿನ ಹಳೆಯ ವಿದ್ಯಾರ್ಥಿನಿಯರು ಆಯೋಜಿಸಿದ್ದ ಈ ವಿಶೇಷ ಕಾರ್ಯಕ್ರಮದಲ್ಲಿ ವರ್ಷಗಳ ಬಳಿಕ ಒಂದಾದ ಸಹಪಾಠಿಗಳು ತಮ್ಮ ಪ್ರೀತಿಯ ಶಿಕ್ಷಕರಿಗೆ ಗೌರವ ನಮನ ಸಲ್ಲಿಸಿ, ಶಾಲಾ ದಿನಗಳ ಸಿಹಿ ನೆನಪುಗಳನ್ನು ಹಂಚಿಕೊಂಡರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಶ್ರೀ ಅನ್ನದಾನ ವಿಜಯ ವಿದ್ಯಾಪ್ರಸಾರಕ ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, “1971ರಲ್ಲಿ ಪೂಜ್ಯ ಗುರು ಅನ್ನದಾನ ಮಹಾಸ್ವಾಮಿಗಳ ದೂರದೃಷ್ಟಿಯಿಂದ ಸ್ಥಾಪನೆಯಾದ ಈ ಶಾಲೆ ಸಾವಿರಾರು ಹೆಣ್ಣುಮಕ್ಕಳ ಬದುಕಿಗೆ ಬೆಳಕಾಗಿದೆ. ಗ್ರಾಮೀಣ ಭಾಗದ ವಿದ್ಯಾರ್ಥಿನಿಯರಿಗೆ ಶಿಕ್ಷಣದ ದಾರಿ ತೋರಿದ ಈ ಸಂಸ್ಥೆ ಇಂದು ಸಮಾಜ




ನಿರ್ಮಾಣದ ಶಕ್ತಿಕೇಂದ್ರವಾಗಿ ಬೆಳೆದಿದೆ” ಎಂದು ಹೇಳಿದರು.

ಅಂದು ಹೆಣ್ಣುಮಕ್ಕಳ ಶಿಕ್ಷಣ ಸವಾಲಾಗಿದ್ದ ಕಾಲಘಟ್ಟದಲ್ಲಿ ಶಿಕ್ಷಣದ ದೀಪ ಹಚ್ಚಿದ ಈ ಶಾಲೆ ಅನೇಕ ಕುಟುಂಬಗಳ ಬದುಕನ್ನು ಬದಲಿಸಿದೆ. ಇಲ್ಲಿಂದ ಶಿಕ್ಷಣ ಪಡೆದ ವಿದ್ಯಾರ್ಥಿನಿಯರು ಇಂದು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿ ಸಮಾಜದಲ್ಲಿ ಗುರುತಿಸಿಕೊಂಡಿರುವುದು ಶಿಕ್ಷಕರ ಸಮರ್ಪಣಾಭಾವಕ್ಕೆ ಸಾಕ್ಷಿಯಾಗಿದೆ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಎಸ್.ಎ.ವಿ.ವಿ.ಪಿ. ಸಮಿತಿಯ ಆಡಳಿತಾಧಿಕಾರಿ ಡಾ. ಜಿ.ಕೆ. ಕಾಳೆ ಮಾತನಾಡಿ, “ಕಳೆದ 55 ವರ್ಷಗಳಿಂದ ಶ್ರೀ ಅನ್ನದಾನ ವಿಜಯ ಬಾಲಕಿಯರ ಪ್ರೌಢಶಾಲೆ ಸಮಾಜಕ್ಕೆ ಪ್ರತಿಭಾವಂತ ವಿದ್ಯಾರ್ಥಿನಿಯರನ್ನು ನೀಡುತ್ತಿದೆ. ಇದು ಕೇವಲ ಶಾಲೆಯಲ್ಲ, ಸಂಸ್ಕಾರ ಮತ್ತು ಮೌಲ್ಯಗಳ ದೇವಾಲಯ” ಎಂದು ಬಣ್ಣಿಸಿದರು.

ಹಳೆಯ ವಿದ್ಯಾರ್ಥಿನಿಯರಾದ ವಿಶಾಲಾಕ್ಷಿ ಬಳಗೋಡ, ಯಶೋಧಾ ಹೊಂದಾಗಲ್, ನೀಲಮ್ಮ ಸಜ್ಜನ, ರತ್ನ ಮೇಲ್ಮನಿ, ಗಿರಿಜಾ, ಶಿಲ್ಪಾ, ಸಂಧ್ಯಾ ದಾಸರ ಹಾಗೂ ರೇಖಾ ತಮ್ಮ ಶಾಲಾ ದಿನಗಳ ನೆನಪುಗಳನ್ನು ಹಂಚಿಕೊಂಡು ಭಾವುಕರಾದರು.

“ನಾವು ಇಂದು ಜೀವನದಲ್ಲಿ ಯಾವ ಹಂತ ತಲುಪಿದ್ದರೂ ಅದರ ಹಿಂದೆ ಗುರುಗಳ ಆಶೀರ್ವಾದ, ಮಾರ್ಗದರ್ಶನ ಮತ್ತು ಶಾಲೆಯ ಸಂಸ್ಕಾರವೇ ಕಾರಣ” ಎಂದು ಅವರು ಕೃತಜ್ಞತೆಯಿಂದ ಸ್ಮರಿಸಿದರು.

ಶಾಲೆಯ ಮುಖ್ಯೋಪಾಧ್ಯಾಯ ಎಸ್. ಎನ್. ಹೂಲಗೇರಿ ಅಧ್ಯಕ್ಷತೆ ವಹಿಸಿದ್ದರು. ಆಶಾ ಕುರ್ತಕೋಟಿ ಹಾಗೂ ತಂಡ ಪ್ರಾರ್ಥನಾ ಗೀತೆ ಹಾಡಿದರು. ಹಳೆಯ ವಿದ್ಯಾರ್ಥಿನಿ ನೀಲಮ್ಮ ಸಜ್ಜನ ಸ್ವಾಗತಿಸಿದರು.

> “ಗುರುಗಳು ಪಾಠ ಮಾತ್ರ ಕಲಿಸಲಿಲ್ಲ; ಬದುಕನ್ನು ಕಟ್ಟಿಕೊಡುವ ದಾರಿ ತೋರಿಸಿದರು. ಇಂದು ನಾವು ಏನಾಗಿದ್ದೇವೋ ಅದರ ಹಿಂದೆ ಅವರ ತ್ಯಾಗ ಮತ್ತು ಮಾರ್ಗದರ್ಶನವೇ ಇದೆ.”
> – **ರವೀಂದ್ರನಾಥ ದೊಡ್ಡಮೇಟಿ,** ಪ್ರಧಾನ ಕಾರ್ಯದರ್ಶಿ

ಕಾರ್ಯಕ್ರಮದಲ್ಲಿ ಶಿಕ್ಷಕರಾದ ಎ.ಟಿ. ಮಳ್ಳಳ್ಳಿ, ಬಿ.ಡಿ. ಯರಗೊಪ್ಪ, ಎಂ.ಎಸ್. ಅತ್ತಾರ್, ಎಸ್. ಶಿವಮೂರ್ತಿ, ರಮೇಶ ಸಿಳ್ಳಿನ್, ಬಸನಗೌಡ ಹಿರೇಒಡೆಯರ, ಶ್ರೀಮತಿ ಆರ್.ಎಸ್. ಪಾಟೀಲ ಹಾಗೂ ಎಸ್.ಎಫ್. ಧರ್ಮಾಯತ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಹಳೆಯ ವಿದ್ಯಾರ್ಥಿನಿಯರು ತಮ್ಮ ಗುರುಗಳಿಗೆ ಸನ್ಮಾನ ಸಲ್ಲಿಸಿ ಗೌರವಿಸಿದರು. ಹಲವು ವರ್ಷಗಳ ಬಳಿಕ ಭೇಟಿಯಾದ ಸ್ನೇಹಿತೆಯರು ಪರಸ್ಪರ ಅಪ್ಪಿಕೊಂಡು ಸಂತಸ ಹಂಚಿಕೊಂಡ ದೃಶ್ಯಗಳು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದವು.

ಸುಮಾ ಸಂಕನಗೌಡ್ರ ಹಾಗೂ ರೇಣುಕಾ ಧ್ಯಾಮನಗೌಡ್ರ ಕಾರ್ಯಕ್ರಮ ನಿರೂಪಿಸಿದರು. ರತ್ನ ಮೇಲ್ಮನಿ ವಂದನಾರ್ಪಣೆ ಸಲ್ಲಿಸಿದರು.

**ಹಿರಿಯ ಹಿಂದಿ ಶಿಕ್ಷಕ ಎಂ.ಎಸ್. ಅತ್ತಾರ್ ಅವರಿಗೆ ಬೀಳ್ಕೊಡುಗೆ**

## 27 ವರ್ಷಗಳ ಸೇವೆಗೆ ಗೌರವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶ್ರೀ ಅನ್ನದಾನ ವಿಜಯ ವಿದ್ಯಾಪ್ರಸಾರಕ ಸಂಸ್ಥೆಯ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅ.ವಿ. ಬಾಲಕಿಯರ ಪ್ರೌಢಶಾಲೆಯ ಹಿರಿಯ ಹಿಂದಿ ಶಿಕ್ಷಕರಾದ ಎಂ.ಎಸ್. ಅತ್ತಾರ್ ಅವರ ನಿವೃತ್ತಿ ನಿಮಿತ್ತ ಆಯೋಜಿಸಿದ್ದ ಸನ್ಮಾನ ಸಮಾರಂಭ ಭಾವನಾತ್ಮಕ ವಾತಾವರಣದಲ್ಲಿ ನೆರವೇರಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, “ಅತ್ತಾರ್ ಅವರು 27 ವರ್ಷ 6 ತಿಂಗಳ ಕಾಲ ನಿಷ್ಠೆ, ಪ್ರಾಮಾಣಿಕತೆ ಹಾಗೂ ಶಿಸ್ತುಬದ್ಧತೆಯಿಂದ ಸೇವೆ ಸಲ್ಲಿಸಿ ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ಬೆಳಕಾಗಿದ್ದಾರೆ” ಎಂದು ಹೇಳಿದರು.

ನಿಡಗುಂದಿ ಹಾಗೂ ನರೇಗಲ್ಲ ಪ್ರೌಢಶಾಲೆಗಳಲ್ಲಿ ಹಿಂದಿ ಶಿಕ್ಷಕರಾಗಿ ಸೇವೆ ಸಲ್ಲಿಸಿದ ಅವರು ವಿದ್ಯಾರ್ಥಿಗಳ ಅಚ್ಚುಮೆಚ್ಚಿನ ಶಿಕ್ಷಕರಾಗಿದ್ದರು. ಅವರ ನಿವೃತ್ತಿಯಿಂದ ಸಂಸ್ಥೆಗೆ ತುಂಬಲಾರದ ನಷ್ಟ ಉಂಟಾಗಿದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವೀರಣ್ಣ ಹಳ್ಳಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಎಸ್.ಎ.ವಿ.ವಿ.ಪಿ. ಸಮಿತಿಯ ಆಡಳಿತಾಧಿಕಾರಿ ಡಾ. ಜಿ.ಕೆ. ಕಾಳೆ ಹಾಗೂ ಶಾಲಾ ಆಡಳಿತ ಮಂಡಳಿಯ ಸದಸ್ಯ ಎಂ.ಪಿ. ತಳಬಾಳ್ ಭಾಗವಹಿಸಿದ್ದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ಎಸ್. ಎನ್. ಹೂಲಗೇರಿ, ಶಿಕ್ಷಕರಾದ ಎಂ.ಬಿ. ಸಜ್ಜನ್, ಎಂ.ವಿ. ವೀರಾಪುರ ಹಾಗೂ ಎಸ್.ಬಿ. ಕೊಪ್ಪದ ಮಾತನಾಡಿ, ಅತ್ತಾರ್ ಅವರ ಸೇವಾ ಮನೋಭಾವ, ವಿದ್ಯಾರ್ಥಿಗಳ ಮೇಲಿನ ಕಾಳಜಿ ಹಾಗೂ ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಅಮೂಲ್ಯ ಕೊಡುಗೆಯನ್ನು ಸ್ಮರಿಸಿದರು.

ವೇದಿಕೆಯಲ್ಲಿ ಹಿರಿಯರಾದ ಎಸ್.ಕೆ. ಪಾಟೀಲ, ಬಿ.ಜಿ. ಶಿರಸಿ ಹಾಗೂ ಬಂಡಿಹಾಳ ಉಪಸ್ಥಿತರಿದ್ದರು. ಶಿಕ್ಷಕರಾದ ಎಸ್.ಬಿ. ಬೂದಿಹಾಳ, ಎಂ.ವಿ. ಬಿಂಗಿ, ಐ. ಜ್ಞಾನೇಶ್ವರಿ ಹಾಗೂ ಎಸ್. ಶಿವಮೂರ್ತಿ ಅವರು ಅತ್ತಾರ್ ಅವರ ಸರಳ ವ್ಯಕ್ತಿತ್ವ, ಬದ್ಧತೆ ಹಾಗೂ ಸೇವಾ ಮನೋಭಾವವನ್ನು ಕೊಂಡಾಡಿದರು.

ಕಾರ್ಯಕ್ರಮದಲ್ಲಿ ವಿವಿಧ ಶಾಲೆಗಳ ಮುಖ್ಯೋಪಾಧ್ಯಾಯರು, ಪ್ರಾಚಾರ್ಯರು, ಶಿಕ್ಷಕರು ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು. ಅಲ್ಲದೆ ಶಾಲಾ ವಿದ್ಯಾರ್ಥಿಗಳು, ಅತ್ತಾರ್ ಅವರ ಬಂಧುಗಳು, ಅಭಿಮಾನಿಗಳು ಹಾಗೂ ಹಳೆಯ ವಿದ್ಯಾರ್ಥಿನಿಯರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದು, ತಮ್ಮ ಪ್ರೀತಿಯ ಶಿಕ್ಷಕರಿಗೆ ಭಾವಪೂರ್ಣ ಬೀಳ್ಕೊಡುಗೆ ನೀಡಿದರು.

ಕಾರ್ಯಕ್ರಮವನ್ನು ಬಿ.ಡಿ. ಯರಗೊಪ್ಪ ನಿರೂಪಿಸಿದರು. ಎಸ್.ಎಫ್. ಧರ್ಮಾಯತ ವಂದನಾರ್ಪಣೆ ಸಲ್ಲಿಸಿದರು.



> “ವಿದ್ಯಾರ್ಥಿಗಳ ಮನದಲ್ಲಿ ಹಿಂದಿ ಭಾಷೆಯ ಬಗ್ಗೆ ಆಸಕ್ತಿ ಮೂಡಿಸಿ, ಮೌಲ್ಯಯುತ ಶಿಕ್ಷಣ ನೀಡಿದ ಶಿಕ್ಷಕ ಎಂ.ಎಸ್. ಅತ್ತಾರ್ ಅವರ ಸೇವೆ ಸದಾ ಸ್ಮರಣೀಯ.”
> – **ರವೀಂದ್ರನಾಥ ದೊಡ್ಡಮೇಟಿ,** ಸಂಸ್ಥೆಯ ಪ್ರಧಾನ ಕಾರ್ಯದರ್ಶಿ

**ಗದಗವಾಣಿ ವಾರ್ಷಿಕೋತ್ಸವಕ್ಕೆ ಜನಸಾಗರ ಸಾಕ್ಷಿ–ಗಾನಕೋಗಿಲೆ ಗ್ರ್ಯಾಂಡ್ ಫಿನಾಲೆ, ರಾಜ್ಯ ಪ್ರಶಸ್ತಿ ಪ್ರದಾನಕ್ಕೆ ಅದ್ದೂರಿ ಮೆರುಗು**

# ಗದಗದಲ್ಲಿ ಪ್ರತಿಭೆಗಳ ಮಹಾಸಂಗಮ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವಾಣಿ ಪ್ರಾದೇಶಿಕ ದಿನಪತ್ರಿಕೆಯ 4ನೇ ವಾರ್ಷಿಕೋತ್ಸವ ಹಾಗೂ ಕ್ರಾಂತಿಸೂರ್ಯ ಜೈಭೀಮ್ ಸೇನೆಯ ಪ್ರಥಮ ವಾರ್ಷಿಕೋತ್ಸವದ ಅಂಗವಾಗಿ ಗದಗ ನಗರದ ಜಗದ್ಗುರು ತೋಂಟದಾರ್ಯ ಮಠದ ಆವರಣದಲ್ಲಿ ಆಯೋಜಿಸಲಾದ “ಗದಗವಾಣಿ ಗಾನಕೋಗಿಲೆ ಸೀಸನ್–5” ಗ್ರ್ಯಾಂಡ್ ಫಿನಾಲೆ, “ಕರುನಾಡ ಕಾಯಕ ಸಮ್ಮಾನ್–2026” ಹಾಗೂ ರಾಜ್ಯ ಮಟ್ಟದ ಪ್ರಶಸ್ತಿ ಪ್ರದಾನ ಸಮಾರಂಭವು ಸಾವಿರಾರು ಜನರ ಸಮ್ಮುಖದಲ್ಲಿ ಅದ್ದೂರಿಯಾಗಿ ಜರುಗಿ ಜಿಲ್ಲೆಯ ಸಾಂಸ್ಕೃತಿಕ ಇತಿಹಾಸದಲ್ಲೇ ವಿಶಿಷ್ಟ ಸಂಭ್ರಮಕ್ಕೆ ಸಾಕ್ಷಿಯಾಯಿತು.

ಸಂಗೀತ, ಸಂಸ್ಕೃತಿ, ಸನ್ಮಾನ ಹಾಗೂ ಜನಸಾಗರದ ಸಂಭ್ರಮ ಒಂದೇ ವೇದಿಕೆಯಲ್ಲಿ ಒಂದಾಗಿದ್ದ ಈ ಕಾರ್ಯಕ್ರಮ ಗದಗ ಜಿಲ್ಲೆಯ ಅತ್ಯಂತ ಭವ್ಯ ಮತ್ತು ಸ್ಮರಣೀಯ ಸಮಾರಂಭಗಳಲ್ಲಿ ಒಂದಾಗಿ ಹೊರಹೊಮ್ಮಿತು.

ಸಾಧಕರಿಗೆ ರಾಜ್ಯ ಮಟ್ಟದ ಗೌರವ

ಶಿಕ್ಷಣ, ಸಾಹಿತ್ಯ, ಸಂಗೀತ, ಕಲೆ, ಸಮಾಜಸೇವೆ, ಪತ್ರಿಕೋದ್ಯಮ, ವೈದ್ಯಕೀಯ, ಕೃಷಿ, ಉದ್ಯಮ, ಯುವಸೇವೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರಿಗೆ ರಾಜ್ಯ ಮಟ್ಟದ ಪ್ರಶಸ್ತಿಗಳನ್ನು ಪ್ರದಾನಿಸಿ ಗೌರವಿಸಲಾಯಿತು.

ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಗಣ್ಯರು, ಕಲಾವಿದರು, ಸಾಮಾಜಿಕ ಹೋರಾಟಗಾರರು ಹಾಗೂ ಸಾರ್ವಜನಿಕರು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದರು.

ಈ ಸಂಚಿಕೆಯಲ್ಲಿ ಕಾರ್ಯಕ್ರಮದ ಅಪರೂಪದ ಕ್ಷಣಗಳು, ಪ್ರಶಸ್ತಿ ಪುರಸ್ಕೃತರ ಸನ್ಮಾನ, ಗಾನಕೋಗಿಲೆ ಸ್ಪರ್ಧೆಯ ವಿಶೇಷ ದೃಶ್ಯಗಳು ಹಾಗೂ ಗಣ್ಯರ ಉಪಸ್ಥಿತಿಯ ಛಾಯಾಚಿತ್ರಗಳು ಪ್ರಕಟವಾಗಿವೆ.




> “ಪ್ರತಿಭೆಗಳನ್ನು ಗುರುತಿಸಿ ಗೌರವಿಸುವ ವೇದಿಕೆಗಳು ಸಮಾಜಕ್ಕೆ ಹೊಸ ಚೈತನ್ಯ ಮತ್ತು ಪ್ರೇರಣೆ ನೀಡುತ್ತವೆ.”
> – **ಕೃಷ್ಣಗೌಡ ಹೆಚ್. ಪಾಟೀಲ, ಅಧ್ಯಕ್ಷರು, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ**

### ಗಾನಕೋಗಿಲೆ ಗಾಯನಕ್ಕೆ ಮನಸೋತ ಜನತೆ

“ಗದಗವಾಣಿ ಗಾನಕೋಗಿಲೆ ಸೀಸನ್–5”ರ ಗ್ರ್ಯಾಂಡ್ ಫಿನಾಲೆಯಲ್ಲಿ ಸ್ಪರ್ಧಿಗಳು ಸುಮಧುರ ಗಾಯನದ ಮೂಲಕ ಪ್ರೇಕ್ಷಕರ ಮನ ಗೆದ್ದರು. ಸಂಗೀತ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ನೆರೆದಿದ್ದ ಜನರಿಂದ ಭಾರೀ ಮೆಚ್ಚುಗೆ ಪಡೆದವು.

ಕಾರ್ಯಕ್ರಮದ ಆರಂಭದಿಂದ ಅಂತ್ಯದವರೆಗೆ ಸಭಾಂಗಣ ಜನಸಾಗರದಿಂದ ಕಿಕ್ಕಿರಿದು ತುಂಬಿತ್ತು.

### ಗದಗದ ಸಾಂಸ್ಕೃತಿಕ ಶಕ್ತಿಗೆ ಕನ್ನಡಿ

ಕಾರ್ಯಕ್ರಮವು ಗದಗ ಜಿಲ್ಲೆಯ ಸಾಂಸ್ಕೃತಿಕ ವೈಭವ, ಪ್ರತಿಭೆಗಳ ಸಾಮರ್ಥ್ಯ ಹಾಗೂ ಸಾಮಾಜಿಕ ಒಗ್ಗಟ್ಟಿಗೆ ಜೀವಂತ ಸಾಕ್ಷಿಯಾಯಿತು. ಕಾರ್ಯಕ್ರಮದ ಯಶಸ್ಸಿಗೆ ಸಹಕರಿಸಿದ ಅತಿಥಿಗಳು, ಪ್ರಾಯೋಜಕರು, ಸಂಘ–ಸಂಸ್ಥೆಗಳು, ಕಲಾವಿದರು, ಸ್ಪರ್ಧಿಗಳು, ಪ್ರಶಸ್ತಿ ಪುರಸ್ಕೃತರು, ಮಾಧ್ಯಮ ಪ್ರತಿನಿಧಿಗಳು ಹಾಗೂ ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಿದ ಸಾರ್ವಜನಿಕರಿಗೆ ಗದಗವಾಣಿ ಕುಟುಂಬ ಕೃತಜ್ಞತೆ ಸಲ್ಲಿಸಿತು.

**ಸೇವಾನಿವೃತ್ತ ಪ್ರಾಚಾರ್ಯ ಎಸ್.ಎಲ್. ಗುಳೇದಗುಡ್ಡರಿಗೆ ಭಾವಪೂರ್ಣ ಬೀಳ್ಕೊಡುಗೆ**

# ವಿದ್ಯಾರ್ಥಿಗಳ ಬದುಕು ಕಟ್ಟಿದ ಶಿಕ್ಷಕನಿಗೆ ಗೌರವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

“ಗ್ರಾಮೀಣ ಪ್ರದೇಶದ ಸರ್ಕಾರಿ ಕಾಲೇಜುಗಳು ಸದೃಢ ಸಮಾಜ ನಿರ್ಮಾಣದಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ರೈತರು, ಬಡವರು ಹಾಗೂ ಆರ್ಥಿಕವಾಗಿ ಹಿಂದುಳಿದವರ ಮಕ್ಕಳು ಶಿಕ್ಷಣ ಪಡೆದು ಬದುಕು ಕಟ್ಟಿಕೊಳ್ಳುವುದನ್ನು ನೋಡುವುದೇ ನಿಜವಾದ ಸಂತೋಷ” ಎಂದು ಸೇವಾನಿವೃತ್ತ ಪ್ರಾಚಾರ್ಯ ಎಸ್. ಎಲ್. ಗುಳೇದಗುಡ್ಡ ಹೇಳಿದರು.

ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ಶನಿವಾರ ನಡೆದ ಸೇವಾನಿವೃತ್ತಿ ಹಾಗೂ ಬೀಳ್ಕೊಡುಗೆ ಸಮಾರಂಭದಲ್ಲಿ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

“ಶಿಕ್ಷಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದುವುದು ನನ್ನ ಜೀವನದ ಸೌಭಾಗ್ಯ. ಸೇವಾ ಅವಧಿಯಲ್ಲಿ ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಮಾಡಿದ ಕೆಲಸ ಆತ್ಮತೃಪ್ತಿ ನೀಡಿದೆ” ಎಂದು ತಮ್ಮ ಸೇವಾ ದಿನಗಳನ್ನು ಸ್ಮರಿಸಿದರು.

ಶಿಕ್ಷಣ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಪ್ರಕಾಶ ಹೊಸಮನಿ ಮಾತನಾಡಿ, “ಸರ್ಕಾರಿ ಕಾಲೇಜಿನ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ಜೀವನದಲ್ಲಿ ಸಾಧನೆ ಮಾಡಬೇಕು ಎಂಬ ಉದ್ದೇಶದಿಂದ ಪ್ರಾ. ಗುಳೇದಗುಡ್ಡ ಅವರು ನಿರಂತರ ಶ್ರಮಿಸಿದ್ದಾರೆ. ಕಾಲೇಜಿನ ಅಭಿವೃದ್ಧಿಗೂ ಅವರ ಕೊಡುಗೆ ಅಪಾರ” ಎಂದು ಹೇಳಿದರು.

ಗದಗದ ನಿವೃತ್ತ ಪ್ರಾಂಶುಪಾಲ ಎಫ್.ಎಸ್. ಸಿದ್ನೇಕೊಪ್ಪ ಮಾತನಾಡಿ, “ಕಾಲೇಜು ನಮಗೆ ಏನು ಕೊಟ್ಟಿದೆ ಎನ್ನುವುದಕ್ಕಿಂತ ನಾವು ಕಾಲೇಜಿಗೆ ಏನು ಕೊಟ್ಟಿದ್ದೇವೆ ಎಂಬ ಮನೋಭಾವದಿಂದ ಬದುಕಬೇಕು. ಆ ರೀತಿಯ ಸೇವಾ ಮನೋಭಾವ ಹೊಂದಿದ್ದ ಗುಳೇದಗುಡ್ಡರ ನಿವೃತ್ತ ಜೀವನ ಸುಖಕರವಾಗಿರಲಿ” ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಹಿರಿಯ ಪ್ರಾಧ್ಯಾಪಕಿ ಜಯಶ್ರೀ ಮುತಗಾರ ಕಾಲೇಜಿನ ನೂತನ ಪ್ರಾಚಾರ್ಯರಾಗಿ ಅಧಿಕಾರ ಸ್ವೀಕರಿಸಿದರು.


ಕಾರ್ಯಕ್ರಮದಲ್ಲಿ ಈ.ಆರ್. ಲಗಳೂರ, ಶೋಭಾ ಮೆರವಾಡೆ, ಎಸ್.ಎಸ್. ಸೂಡಿ, ಸುನಂದಾ ಮುಂಜಿ, ಕಾಂಚನಮಾಲಾ ಪಾಟೀಲ, ನಸರೀನಾಬಾನು ಜಮಾದರು, ಶಿವಮೂರ್ತಿ ಕುರೇರ, ಅನಿಲಕುಮಾರ, ಶಶಿಕಲಾ ವಿ.ಎಸ್., ವಿರೂಪಾಕ್ಷ ದೇಶನೂರ, ವಿ.ಸಿ. ಇಲ್ಲೂರ, ಎಂ.ಎಫ್. ತಹಶೀಲ್ದಾರ, ಕೆ.ಎನ್. ಕಟ್ಟಿಮನಿ, ವಿ.ಕೆ. ಸಂಗನಾಳ, ಎನ್.ಎಸ್. ಹೊಸ್ಮೂರ, ಬಸವರಾಜ ಎಸ್. ಮಡಿವಾಳರ ಹಾಗೂ ಲಕ್ಷ್ಮಣ ಹಲ್ಲೂರ ಉಪಸ್ಥಿತರಿದ್ದರು.




> “ಬಡ ಮತ್ತು ಗ್ರಾಮೀಣ ವಿದ್ಯಾರ್ಥಿಗಳ ಬದುಕಿಗೆ ಶಿಕ್ಷಣದ ಮೂಲಕ ಬೆಳಕು ನೀಡುವುದಕ್ಕಿಂತ ದೊಡ್ಡ ಸಂತೋಷ ಮತ್ತೊಂದಿಲ್ಲ.”
> – **ಎಸ್.ಎಲ್. ಗುಳೇದಗುಡ್ಡ,** ಸೇವಾನಿವೃತ್ತ ಪ್ರಾಚಾರ್ಯರು

**ವೇದಮಂತ್ರಗಳ ಘೋಷದ ನಡುವೆ ವಿಶೇಷ ಪೂಜೆ, ಹೋಮ; ಭಕ್ತರಿಂದ ಕುಟುಂಬ ಸಮೇತ ದರ್ಶನ**

## ಅಧಿಕ ಮಾಸದ ಸಂಭ್ರಮ: ಸತ್ಯನಾರಾಯಣ ಪೂಜೆ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ತಿರುಪತಿ ವೆಂಕಟೇಶ್ವರ ದೇವಸ್ಥಾನದಲ್ಲಿ ಅಧಿಕ ಮಾಸದ ಅಂಗವಾಗಿ ಭಾನುವಾರ ಭಕ್ತಿಭಾವದಿಂದ ಶ್ರೀ ಸತ್ಯನಾರಾಯಣ ಪೂಜೆ ನೆರವೇರಿಸಲಾಯಿತು.

ಅಧಿಕ ಮಾಸವು ಧಾರ್ಮಿಕವಾಗಿ ವಿಶೇಷ ಮಹತ್ವ ಹೊಂದಿರುವ ಹಿನ್ನೆಲೆಯಲ್ಲಿ ದೇವಸ್ಥಾನದಲ್ಲಿ ಬೆಳಗ್ಗೆಯಿಂದಲೇ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ವೇದಮಂತ್ರಗಳ ಘೋಷದ ನಡುವೆ ಪೂಜೆ, ಹೋಮ ಹಾಗೂ ಸತ್ಯನಾರಾಯಣ ಕಥಾ ಪಾರಾಯಣ ನಡೆಯಿತು.

ಪೂಜೆಯಲ್ಲಿ ಭಾಗವಹಿಸಿದ ಭಕ್ತರು ಕುಟುಂಬ ಸಮೇತರಾಗಿ ದೇವರ ದರ್ಶನ ಪಡೆದು ವಿಶೇಷ ಪ್ರಾರ್ಥನೆ ಸಲ್ಲಿಸಿದರು. ದೇವಸ್ಥಾನದ ಅರ್ಚಕರಾದ ವರದರಾಜ ಒಡವಿ ಪೂಜಾ ವಿಧಿವಿಧಾನಗಳನ್ನು ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, “ಅಧಿಕ ಮಾಸದಲ್ಲಿ ಶ್ರೀ ಸತ್ಯನಾರಾಯಣ ಪೂಜೆ ನೆರವೇರಿಸುವುದರಿಂದ ಕುಟುಂಬದಲ್ಲಿ ಸುಖ, ಶಾಂತಿ ಹಾಗೂ ಸಮೃದ್ಧಿ ವೃದ್ಧಿಯಾಗುತ್ತದೆ. ಇಂತಹ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಕುಟುಂಬ ಸಮೇತ ಭಾಗವಹಿಸುವುದು ಶ್ರೇಯಸ್ಕರ” ಎಂದು ತಿಳಿಸಿದರು.

ಪೂಜೆಯ ನಂತರ ಭಕ್ತರಿಗೆ ಪ್ರಸಾದ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ದೇವಸ್ಥಾನದ ಆಡಳಿತ ಮಂಡಳಿಯ ಸದಸ್ಯರು, ಮುಖಂಡರು ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಭಾಗವಹಿಸಿದ್ದರು.

ದೇವಸ್ಥಾನದ ವ್ಯವಸ್ಥಾಪಕ ರಮೇಶ ಬಾವಿಕಟ್ಟಿ ಕಾರ್ಯಕ್ರಮವನ್ನು ನಿರ್ವಹಿಸಿದರು.

# ಸೈನಿಕರ ಪುತ್ರಿಯರಿಗೆ ಸುವರ್ಣಾವಕಾಶ

■ವಿಜಯಸಾಕ್ಷಿ ಸುದ್ದಿ, ಗದಗ

2026–27ನೇ ಶೈಕ್ಷಣಿಕ ಸಾಲಿಗೆ ಧಾರವಾಡ ನಗರದ ಸಪ್ತಾಪೂರ ರಸ್ತೆಯಲ್ಲಿರುವ ಮಿಲಿಟರಿ ಬಾಲಕಿಯರ ವಸತಿ ನಿಲಯದ ಪ್ರವೇಶಕ್ಕಾಗಿ ಸೈನಿಕರ ಹೆಣ್ಣು ಮಕ್ಕಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಧಾರವಾಡ, ಗದಗ, ಹಾವೇರಿ ಹಾಗೂ ಬಳ್ಳಾರಿ ಜಿಲ್ಲೆಗಳ ಗ್ರಾಮೀಣ ಪ್ರದೇಶಗಳ ವಿದ್ಯಾರ್ಥಿನಿಯರು ಸೇರಿದಂತೆ ರಾಜ್ಯದ ಇತರ ಜಿಲ್ಲೆಗಳ ಯುದ್ಧದಲ್ಲಿ ಮೃತಪಟ್ಟ ಯೋಧರ ಹಾಗೂ ಮಾಜಿ ಸೈನಿಕರ ಪುತ್ರಿಯರು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಜೂನ್ 15 ಕೊನೆಯ ದಿನವಾಗಿದೆ.

ವಿದ್ಯಾರ್ಥಿನಿಲಯದಲ್ಲಿ 5ನೇ ತರಗತಿಯಿಂದ ಪಿಯುಸಿ ದ್ವಿತೀಯ ವರ್ಷದವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿನಿಯರಿಗೆ ಪ್ರವೇಶ ನೀಡಲಾಗುತ್ತದೆ.

ವಸತಿ ನಿಲಯದಲ್ಲಿ ವಾಸ್ತವ್ಯ ಹಾಗೂ ಊಟೋಪಚಾರ ಸಂಪೂರ್ಣ ಉಚಿತವಾಗಿದ್ದು, ಮಾಜಿ ಸೈನಿಕರ ಪುತ್ರಿಯರು ಈ ಸೌಲಭ್ಯದ ಸದುಪಯೋಗ ಪಡೆದುಕೊಳ್ಳುವಂತೆ ಇಲಾಖೆ ಮನವಿ ಮಾಡಿದೆ.

ಧಾರವಾಡ ನಗರದ ವಿದ್ಯಾಸಂಸ್ಥೆಗಳಲ್ಲಿ ಪ್ರವೇಶ ಪಡೆದ ವಿದ್ಯಾರ್ಥಿನಿಯರಿಗೆ ಮಾತ್ರ ವಸತಿ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗಾಗಿ ಜಂಟಿ ನಿರ್ದೇಶಕರು, ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ, ಉದಯ ಹಾಸ್ಟೆಲ್ ಸರ್ಕಲ್, ಸೈನಿಕ ವಿಶ್ರಾಂತಿ ಗೃಹ ಆವರಣ, ಧಾರವಾಡ ಕಚೇರಿಯನ್ನು ಸಂಪರ್ಕಿಸಬಹುದು. ದೂರವಾಣಿ ಸಂಖ್ಯೆ: 0836–2440176

**ಬೇಸಿಗೆ ರಜೆ ಬಳಿಕ ಮತ್ತೆ ಕಂಗೊಳಿಸಿದ ಶಾಲೆಗಳು–ಗದಗ ಜಿಲ್ಲೆಯಲ್ಲಿ ಸಂಭ್ರಮದ ಶಾಲಾ ಪ್ರಾರಂಭೋತ್ಸವ**

# ಗುಲಾಬಿ ಹೂವಿನ ಸ್ವಾಗತಕ್ಕೆ ಖುಷಿಯಾದ ಮಕ್ಕಳು

■ವಿಜಯಸಾಕ್ಷಿ ಸುದ್ದಿ, ಗದಗ

ಎರಡು ತಿಂಗಳ ಬೇಸಿಗೆ ರಜೆಯ ನಂತರ ಸೋಮವಾರ ಜಿಲ್ಲೆಯಾದ್ಯಂತ ಶಾಲೆಗಳು ಪುನಃ ಆರಂಭಗೊಂಡಿದ್ದು, ವಿದ್ಯಾರ್ಥಿಗಳ ಆಗಮನದಿಂದ ಶಾಲಾ ಆವರಣಗಳು ಮತ್ತೆ ಕಲರವದಿಂದ ಜೀವಂತಗೊಂಡವು. ಹೊಸ ಶೈಕ್ಷಣಿಕ ವರ್ಷದ ಮೊದಲ ದಿನವಾದ ಶಾಲಾ ಪ್ರಾರಂಭೋತ್ಸವವನ್ನು ಜಿಲ್ಲೆಯ ವಿವಿಧ ಸರ್ಕಾರಿ ಹಾಗೂ ಖಾಸಗಿ ಶಾಲೆಗಳಲ್ಲಿ ಸಂಭ್ರಮ, ಸಡಗರ ಮತ್ತು ವಿಶೇಷ ಸ್ವಾಗತದೊಂದಿಗೆ ಆಚರಿಸಲಾಯಿತು.

ಶಾಲೆಗೆ ಆಗಮಿಸಿದ ವಿದ್ಯಾರ್ಥಿಗಳನ್ನು ಶಿಕ್ಷಕರು ಹಾಗೂ ಸಿಬ್ಬಂದಿ ಗುಲಾಬಿ ಹೂವು ನೀಡಿ ಆತ್ಮೀಯವಾಗಿ ಬರಮಾಡಿಕೊಂಡರು. ಕೆಲವೆಡೆ ಸಿಹಿ ಹಂಚುವ ಮೂಲಕ ಮಕ್ಕಳಿಗೆ ಸ್ವಾಗತ ಕೋರಲಾಯಿತು. ಮೊದಲ ದಿನವೇ ಶಾಲಾ ವಾತಾವರಣ ಹಬ್ಬದ ಸಂಭ್ರಮದಂತೆ ಕಂಗೊಳಿಸಿತು.

ಹೊಸ ಪುಸ್ತಕ, ಹೊಸ ತರಗತಿ... ಮಕ್ಕಳ ಮುಖದಲ್ಲಿ ಸಂಭ್ರಮ

ಎಪ್ರಿಲ್ ಹಾಗೂ ಮೇ ತಿಂಗಳ ಬೇಸಿಗೆ ರಜೆಯನ್ನು ಖುಷಿಯಿಂದ ಕಳೆದ ವಿದ್ಯಾರ್ಥಿಗಳು ಹೊಸ ಉತ್ಸಾಹದೊಂದಿಗೆ ಶಾಲೆಯತ್ತ ಮುಖ ಮಾಡಿದರು. ಹೊಸ ಪುಸ್ತಕಗಳು, ಹೊಸ ತರಗತಿ ಕೊಠಡಿಗಳು ಹಾಗೂ ಸ್ನೇಹಿತರೊಂದಿಗೆ ಮತ್ತೆ ಕಲಿಕೆ ಆರಂಭಿಸುವ ಸಂತಸ ಮಕ್ಕಳ ಮುಖದಲ್ಲಿ ಎದ್ದು ಕಾಣುತ್ತಿತ್ತು.





ವಿಶೇಷವಾಗಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಮುಂದಿನ ತರಗತಿಗೆ ಕಾಲಿಟ್ಟ ಖುಷಿ ವಿದ್ಯಾರ್ಥಿಗಳಲ್ಲಿ ಹೆಚ್ಚಾಗಿ ಕಂಡುಬಂತು.

ನಗರದ ಗಂಗಾಪುರ ಪೇಟೆ, ಶಹಾಪುರ ಪೇಟೆ, ಗಂಗಿಮಡಿ ಸೇರಿದಂತೆ ಜಿಲ್ಲೆಯ ವಿವಿಧ ಶಾಲೆಗಳಲ್ಲಿ ಶಾಲಾ ಪ್ರಾರಂಭೋತ್ಸವ ಅದ್ದೂರಿಯಾಗಿ ನಡೆಯಿತು. ಶಾಲಾ ಆವರಣಗಳನ್ನು ಸ್ವಚ್ಛಗೊಳಿಸಿ ವರ್ಣರಂಜಿತವಾಗಿ ಅಲಂಕರಿಸಲಾಗಿತ್ತು.

**ಮಾವಿನ ಶಿಕರಣೆ ಸವಿದು ಖುಷಿಯಾದ ಮಕ್ಕಳು**

ನಗರದ ಸರ್ಕಾರಿ ಪ್ರಾಥಮಿಕ ಶಾಲೆ ನಂ. 2ರಲ್ಲಿ ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಊಟದೊಂದಿಗೆ ವಿಶೇಷವಾಗಿ ಮಾವಿನ ಹಣ್ಣಿನ ಶಿಕರಣೆ ತಯಾರಿಸಿ ಬಡಿಸಲಾಯಿತು. ಈ ವಿಶೇಷ ಉಪಹಾರ ಮಕ್ಕಳ ಮನ ಗೆದ್ದಿತು.

ಪುಟ್ಟ ಮಕ್ಕಳಿಗೆ ಶಿಕ್ಷಕರ ಆತ್ಮೀಯ ಸ್ಪರ್ಶ

ಶಿಕ್ಷಣ ಇಲಾಖೆಯ ನಿರ್ದೇಶನದಂತೆ ಮಕ್ಕಳ ಸ್ನೇಹಿ ವಾತಾವರಣ ನಿರ್ಮಿಸಲು ಶಾಲೆಗಳು ವಿಶೇಷ ಗಮನ ಹರಿಸಿದ್ದವು. ಶಾಲೆಗೆ ಮೊದಲ ದಿನ ಬಂದ ಪುಟ್ಟ ಮಕ್ಕಳ ಆತಂಕ ದೂರವಾಗುವಂತೆ ಶಿಕ್ಷಕರು ಪ್ರೀತಿಯಿಂದ ಮಾತನಾಡಿ ಆತ್ಮವಿಶ್ವಾಸ ತುಂಬಿದರು.

ಮಕ್ಕಳನ್ನು ಸೆಳೆಯುವ ಉದ್ದೇಶದಿಂದ ವಿವಿಧ ಸ್ವಾಗತ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು.

ಶಿಕ್ಷಕರ ಆತ್ಮೀಯತೆ ಹಾಗೂ ಮಕ್ಕಳ ಉತ್ಸಾಹದಿಂದ ಈ ಬಾರಿಯ ಶಾಲಾ ಪ್ರಾರಂಭೋತ್ಸವ ಗದಗ ಜಿಲ್ಲೆಯಲ್ಲಿ ವಿಶೇಷ ಮೆರುಗು ಪಡೆದಿದ್ದು, ಹೊಸ ಶೈಕ್ಷಣಿಕ ವರ್ಷಕ್ಕೆ ಭರವಸೆಯ ಆರಂಭ ದೊರೆತಂತಾಗಿದೆ.


**ಕಾಂಗ್ರೆಸ್ ವರಿಷ್ಠರಿಗೆ ರೈತ ಸಂಘದ ಯಲ್ಲಪ್ಪ ಬಾಬರಿ ಆಗ್ರಹ**

# ಯತೀಂದ್ರ ಸಿದ್ದರಾಮಯ್ಯಗೆ ಡಿಸಿಎಂ ಸ್ಥಾನ ನೀಡಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪುತ್ರ ಹಾಗೂ ವರುಣಾ ಕ್ಷೇತ್ರದ ಶಾಸಕ ಯತೀಂದ್ರ ಸಿದ್ದರಾಮಯ್ಯ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಹಾಗೂ ಕುರುಬ ಸಮಾಜದ ಯುವ ಮುಖಂಡ ಯಲ್ಲಪ್ಪ ಎಚ್. ಬಾಬರಿ ಕಾಂಗ್ರೆಸ್ ವರಿಷ್ಠರನ್ನು ಆಗ್ರಹಿಸಿದ್ದಾರೆ.

ರಾಜ್ಯಾದ್ಯಂತ ಸಾಮಾಜಿಕ ಜಾಲತಾಣಗಳಲ್ಲಿ ನಡೆಯುತ್ತಿರುವ "ಡಾ. ವೈ.ಎಸ್. ಅವರನ್ನು ಉಪ ಮುಖ್ಯಮಂತ್ರಿಯನ್ನಾಗಿ ಮಾಡಿ" ಎಂಬ ಅಭಿಯಾನಕ್ಕೆ ಬೆಂಬಲ ಸೂಚಿಸಿರುವ ಅವರು, "ಯತೀಂದ್ರ ಸಿದ್ದರಾಮಯ್ಯ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಿದರೆ ಪಕ್ಷದ ಬೆಂಬಲಿಗ ಶಾಸಕರಿಗೆ ಬಲಿಷ್ಠ ನಾಯಕತ್ವ ದೊರೆಯಲಿದೆ. ಅವರಲ್ಲಿ ಸಿದ್ದರಾಮಯ್ಯ ಅವರ ನಾಯಕತ್ವದ ಗುಣಗಳು ಸ್ಪಷ್ಟವಾಗಿ ಕಾಣಿಸುತ್ತವೆ" ಎಂದು ತಿಳಿಸಿದ್ದಾರೆ.



"ಯತೀಂದ್ರ ಸಿದ್ದರಾಮಯ್ಯ ಅವರಿಗೆ ಇಂಧನ, ನೀರಾವರಿ ಅಥವಾ ಲೋಕೋಪಯೋಗಿ ಇಲಾಖೆಯಂತಹ ಪ್ರಮುಖ ಖಾತೆಗಳನ್ನು ನೀಡಿದರೆ ಕ್ಷೇತ್ರಗಳ ಅಭಿವೃದ್ಧಿಗೆ ಹೆಚ್ಚಿನ ಅನುದಾನ ದೊರೆಯಲು ನೆರವಾಗುತ್ತದೆ" ಎಂದು ಅವರು ಅಭಿಪ್ರಾಯಪಟ್ಟರು.

"ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ನೀಡಿದರೆ ಸಿದ್ದರಾಮಯ್ಯ ಅವರ ಬಹುಕಾಲದ ಕನಸಾದ ಜಾತಿ ಗಣತಿಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಸಾಧ್ಯವಾಗುತ್ತದೆ" ಎಂದು ಹೇಳಿದರು.

> "ಯುವ ನಾಯಕತ್ವಕ್ಕೆ ಅವಕಾಶ ನೀಡಿದರೆ ಕಾಂಗ್ರೆಸ್ ಪಕ್ಷಕ್ಕೆ ಹೊಸ ಚೈತನ್ಯ ಮತ್ತು ಬಲ ದೊರೆಯಲಿದೆ."
>
> **– ಯಲ್ಲಪ್ಪ ಎಚ್. ಬಾಬರಿ,**
> ರೈತ ಸಂಘ ಜಿಲ್ಲಾಧ್ಯಕ್ಷ

"ಮೈಸೂರು ವಿಭಾಗದ ಉಸ್ತುವಾರಿಯನ್ನು ಯತೀಂದ್ರ ಸಿದ್ದರಾಮಯ್ಯ ಅವರಿಗೆ ನೀಡಿದರೆ ಆ ಭಾಗ–ಕ್ಕೆ ಪರಿಣಾಮಕಾರಿ ನಾಯಕತ್ವ ದೊರೆಯಲಿದೆ" ಎಂದು ಬಾಬರಿ ಹೇಳಿದರು.

ಉತ್ತರ ಕರ್ನಾಟಕದ ಹಿರಿಯ ನಾಯಕ ಹೆಚ್. ಕೆ. ಪಾಟೀಲ ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂಬುದು ನಮ್ಮ ಹಿಂದಿನ ಬೇಡಿಕೆಯಾಗಿತ್ತು. ಈಗ ಯುವ ನಾಯಕತ್ವಕ್ಕೂ ಅವಕಾಶ ನೀಡುವ ಮೂಲಕ ಪ್ರಾದೇಶಿಕ ಹಾಗೂ ರಾಜಕೀಯ ಸಮತೋಲನ ಕಾಯ್ದುಕೊಳ್ಳಬೇಕು ಎಂದು ಅವರು ಅಭಿಪ್ರಾಯಪಟ್ಟರು.

ಈ ಕುರಿತು ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ, ಕೆ. ಸಿ. ವೇಣುಗೋಪಾಲ, ಹಾಗೂ ರಣದೀಪಸಿಂಗ್ ಸುರ್ಜೇವಾಲಾ ಅವರ ಗಮನ ಸೆಳೆಯಲಾಗಿದೆ ಎಂದು ತಿಳಿಸಿದರು.

"ನಾವು ಯಾವುದೇ ವ್ಯಕ್ತಿಪೂಜೆ ಮಾಡುವುದಿಲ್ಲ. ರೈತರು ಹಾಗೂ ಹಿಂದುಳಿದ ವರ್ಗಗಳ ಪರವಾಗಿ ಕೆಲಸ ಮಾಡುವ ನಾಯಕರಿಗೆ ನಮ್ಮ ಬೆಂಬಲ ಸದಾ ಇರುತ್ತದೆ" ಎಂದು ಯಲ್ಲಪ್ಪ ಬಾಬರಿ ಸ್ಪಷ್ಟಪಡಿಸಿದರು.

"ಎಚ್.ಕೆ. ಪಾಟೀಲರು, ಜಿ.ಎಸ್. ಪಾಟೀಲರು ಹಾಗೂ ಯತೀಂದ್ರ ಸಿದ್ದರಾಮಯ್ಯ ಅವರು ರೈತಪರ ನಿಲುವು ಹೊಂದಿರುವ ನಾಯಕರು" ಎಂದು ಹೇಳಿದರು.

**ಹಿರಿಯ ನಾಗರಿಕರು, ನಿವೃತ್ತ ನೌಕರರಿಗೆ ಆರೋಗ್ಯ ಕಾರ್ಡ್ ವಿತರಣೆ; ಸಂಗಮೇಶ್ವರ ಆಸ್ಪತ್ರೆಯಿಂದ ವಿಶೇಷ ಸೌಲಭ್ಯ**

# ಆರೋಗ್ಯವೇ ಬದುಕಿನ ದೊಡ್ಡ ಭಾಗ್ಯ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

"ಎಲ್ಲ ಭಾಗ್ಯಗಳಿಗಿಂತ ಮನುಷ್ಯನಿಗೆ ಆರೋಗ್ಯಭಾಗ್ಯವೇ ಅತ್ಯಂತ ಮುಖ್ಯ. ಆರೋಗ್ಯವಾಗಿದ್ದಾಗ ಮಾತ್ರ ಜೀವನದಲ್ಲಿ ಏನನ್ನಾದರೂ ಸಾಧಿಸಲು ಸಾಧ್ಯ" ಎಂದು ಗದಗ ಸಂಗಮೇಶ್ವರ ಆಸ್ಪತ್ರೆಯ ಮುಖ್ಯಸ್ಥ ಡಾ. ಪ್ರಶಾಂತ ಧನ್ನೂರ ಹೇಳಿದರು.

ಪಟ್ಟಣದ ಹಿರೇಮಠದ ಸಭಾಭವನದಲ್ಲಿ ಹಿರಿಯ ನಾಗರಿಕರ ಹಿತರಕ್ಷಣಾ ಸಂಘ, ನಿವೃತ್ತ ನೌಕರರ ಸಂಘ, ಬೀಚಿ ಬಳಗ ಹಾಗೂ ಕಾನಿಪ ಸದಸ್ಯರಿಗೆ ಆರೋಗ್ಯ ಕಾರ್ಡ್ ವಿತರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಆರೋಗ್ಯದ ಮಹತ್ವವನ್ನು ವಿವರಿಸಿದರು.

"ನಾವು ಎಷ್ಟೇ ಎಚ್ಚರಿಕೆಯಿಂದ ಇದ್ದರೂ ಜೀವನದಲ್ಲಿ ಅನಿರೀಕ್ಷಿತ ಘಟನೆಗಳು ಸಂಭವಿಸುತ್ತವೆ. ಅಂತಹ ಸಂದರ್ಭಗಳಲ್ಲಿ ಆಸ್ಪತ್ರೆ ಸೇವೆ ಅನಿವಾರ್ಯವಾಗುತ್ತದೆ. ಇಂದಿನ ದುಬಾರಿ ಚಿಕಿತ್ಸಾ ವೆಚ್ಚದ ನಡುವೆ ಮಧ್ಯಮ ವರ್ಗದವರಿಗೆ ಆರೋಗ್ಯ ಕಾರ್ಡ್ ಬಹಳ ನೆರವಾಗಲಿದೆ" ಎಂದು ಹೇಳಿದರು.

ಶಸ್ತ್ರಚಿಕಿತ್ಸೆ ಹಾಗೂ ಹೆರಿಗೆ ಸಂದರ್ಭಗಳಲ್ಲಿ ಈ ರಿಯಾಯಿತಿ ಕಾರ್ಡ್‌ಗಳು ಹೆಚ್ಚಿನ ಉಪಯೋಗವಾಗುತ್ತವೆ ಎಂದು ತಿಳಿಸಿದರು.

> "ಆರೋಗ್ಯವಾಗಿದ್ದಾಗ ಮಾತ್ರ ಜೀವನದಲ್ಲಿ ಕನಸುಗಳನ್ನು ನನಸು ಮಾಡಬಹುದು; ಆದ್ದರಿಂದ ಆರೋಗ್ಯಭಾಗ್ಯ ಎಲ್ಲರಿಗೂ ಅಗತ್ಯ."
>
> **– ಡಾ. ಪ್ರಶಾಂತ ಧನ್ನೂರ,**
> ಮುಖ್ಯಸ್ಥರು, ಸಂಗಮೇಶ್ವರ ಆಸ್ಪತ್ರೆ

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಡಾ. ಕೆ.ಬಿ. ಧನ್ನೂರ, "ಗದಗ ನಗರ ಆರೋಗ್ಯ ಸೇವೆಗಳ ಪ್ರಮುಖ ಕೇಂದ್ರವಾಗಿ ಬೆಳೆಯುತ್ತಿದೆ. ಸಕಲ ವೈದ್ಯಕೀಯ ಸೌಲಭ್ಯಗಳನ್ನು ಒಂದೇ ಸೂರಿನಡಿ ನೀಡುವ ಉದ್ದೇಶದಿಂದ ಸಂಗಮೇಶ್ವರ ಆಸ್ಪತ್ರೆ ಸ್ಥಾಪಿಸಲಾಗಿದೆ" ಎಂದರು.

"ಯಾವುದೇ ಆರೋಗ್ಯ ಸಮಸ್ಯೆಗೆ ಇಲ್ಲಿ ಸೂಕ್ತ ಚಿಕಿತ್ಸೆ ಮತ್ತು ಪರಿಹಾರ ದೊರೆಯಲಿದೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಸ್ತ್ರೀರೋಗ ತಜ್ಞೆ ಡಾ. ಅನ್ನಪೂರ್ಣಾ ಧನ್ನೂರ ಮಾತನಾಡಿ, "ಸಂಗಮೇಶ್ವರ ಆಸ್ಪತ್ರೆಯಲ್ಲಿ ಬಹುತೇಕ ಎಲ್ಲಾ ರೀತಿಯ ವೈದ್ಯಕೀಯ ಸೌಲಭ್ಯಗಳಿವೆ. ಶೀಘ್ರದಲ್ಲೇ ಬಂಜೆತನ ನಿವಾರಣಾ ಕೇಂದ್ರವೂ ಆರಂಭವಾಗಲಿದೆ" ಎಂದು ತಿಳಿಸಿದರು.

ನಿವೃತ್ತ ನೌಕರರ ಸಂಘದ ಅಧ್ಯಕ್ಷ ದೊಡ್ಡಯ್ಯ ಅರವಟಗಿಮಠ ಮಾತನಾಡಿ, "ನಮ್ಮ ಸಂಘಟನೆಗಳ ಸದಸ್ಯರಿಗೆ ಆರೋಗ್ಯ ಕಾರ್ಡ್ ವಿತರಿಸುವ ಮೂಲಕ ಡಾ. ಪ್ರಶಾಂತ ಧನ್ನೂರ ದಂಪತಿಗಳು ಉತ್ತಮ ಸೇವೆ ಮಾಡಿದ್ದಾರೆ" ಎಂದು ಅಭಿನಂದಿಸಿದರು.

ನಿವೃತ್ತ ಶಿಕ್ಷಕ ಎಂ.ಎಸ್. ಧಡೇಸೂರಮಠ ಹಾಗೂ ಅಧ್ಯಕ್ಷತೆ ವಹಿಸಿದ್ದ ಹಿರಿಯ ನಾಗರಿಕರ ಸಂಘದ ಅಧ್ಯಕ್ಷ, ನ್ಯಾಯವಾದಿ ವೀರಣ್ಣ ದಿಂಡೂರ ಮಾತನಾಡಿದರು.

ವೇದಿಕೆಯಲ್ಲಿ ಬೀಚಿ ಬಳಗದ ಅಧ್ಯಕ್ಷ ಶಿವಯೋಗಿ ಜಕ್ಕಲಿ, ಕಾನಿಪ ಅಧ್ಯಕ್ಷ ಆದರ್ಶ ಕುಲಕರ್ಣಿ ಉಪಸ್ಥಿತರಿದ್ದರು.

ಸಭೆಯಲ್ಲಿ ಹಿರಿಯ ನಾಗರಿಕರ ಸಂಘ, ನಿವೃತ್ತ ನೌಕರರ ಸಂಘ, ಬೀಚಿ ಬಳಗ ಹಾಗೂ ಕಾನಿಪ ಸದಸ್ಯರು ಭಾಗವಹಿಸಿದ್ದರು.

ವೀರಭದ್ರಪ್ಪ ಕೆರಿಯವರ ಪ್ರಾರ್ಥಿಸಿದರು. ಮಹಾದೇವಪ್ಪ ಬೇವಿನಕಟ್ಟಿ ಕಾರ್ಯಕ್ರಮ ನಿರೂಪಿಸಿದರು. ಕಳಕಪ್ಪ ಕಳಕಣ್ಣವರ ಸ್ವಾಗತಿಸಿದರು. ಅರುಣ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ನಿರ್ಮಲಾ ಹಿರೇಮಠ ವಂದಿಸಿದರು.

# ನೂರಕ್ಕೆ ನೂರು ಫಲಿತಾಂಶ ತಂದ ಸರ್ಕಾರಿ ಶಾಲೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಕ್ಕಳ ಭವಿಷ್ಯ ರೂಪಿಸುವಲ್ಲಿ ಪಾಲಕರ ಸಹಕಾರ ಅತ್ಯಂತ ಅಗತ್ಯ ಎಂದು ಎಸ್‌ಡಿಎಂಸಿ ಅಧ್ಯಕ್ಷ ಮಾಹಾದೇವಪ್ಪ ಮಾನೇಗಾರ ಹೇಳಿದರು.

ಪಟ್ಟಣದ ಸರ್ಕಾರಿ ಪ್ರೌಢಶಾಲೆಯಲ್ಲಿ ನಡೆದ 2026–27ನೇ ಸಾಲಿನ ಶಾಲಾ ಪ್ರಾರಂಭೋತ್ಸವದಲ್ಲಿ ವಿದ್ಯಾರ್ಥಿಗಳಿಗೆ ಪುಸ್ತಕ ವಿತರಿಸಿ ಅವರು ಮಾತನಾಡಿದರು.



"2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶಾಲೆ ನೂರಕ್ಕೆ ನೂರು ಫಲಿತಾಂಶ ದಾಖಲಿಸಿದ್ದು ಹೆಮ್ಮೆಯ ಸಂಗತಿ. ವಿದ್ಯಾರ್ಥಿಗಳ ಸಾಧನೆಗಾಗಿ ಶಿಕ್ಷಕರು ಅಪಾರ ಶ್ರಮವಹಿಸುತ್ತಿದ್ದಾರೆ" ಎಂದು ಹೇಳಿದರು.

"ತಮ್ಮ ಮಕ್ಕಳಂತೆ ವಿದ್ಯಾರ್ಥಿಗಳ ಪ್ರಗತಿಗೆ ಕಾಳಜಿ ವಹಿಸಿ ಶಿಕ್ಷಣ ನೀಡುತ್ತಿರುವ ಶಿಕ್ಷಕರ ಕಾರ್ಯ ಶ್ಲಾಘನೀಯ" ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

> "ವಿದ್ಯಾರ್ಥಿಗಳ ಸಾಧನೆಯ ಹಿಂದೆ ಶಿಕ್ಷಕರ ಸಮರ್ಪಣೆ ಮತ್ತು ಪಾಲಕರ ಸಹಕಾರ ಮುಖ್ಯ ಪಾತ್ರ ವಹಿಸುತ್ತದೆ."
>
> **– ಮಾಹಾದೇವಪ್ಪ ಮಾನೇಗಾರ, ಎಸ್‌ಡಿಎಂಸಿ ಅಧ್ಯಕ್ಷರು**

ಕಾರ್ಯಕ್ರಮದಲ್ಲಿ ಗಂಗಪ್ಪ ಸುಂಕಾಪೂರ, ಗುಳಪ್ಪ ಮಜ್ಜಿಗುಡ್ಡ, ಮಹಾಂತೇಶ ನಡಗೇರಿ, ಶಾಲಾ ಪ್ರಧಾನ ಗುರು ಎಸ್.ಎಚ್. ಪೂಜಾರ, ನೂರಹ್ಮದ ನದಾಫ್, ವಿ.ಟಿ. ಅಂಗಡಿ, ಗೀತಾ ಪಾಟೀಲ, ಗೀತಾ ಕುಂದರಗಿ, ಎಸ್.ವಿ. ತಿಮ್ಮಾಪೂರ, ಬಸವರಾಜ ಗೌರಿಮನಿ ಹಾಗೂ ರಾಜೇಶ್ವರಿ ಬಡ್ನಿ ಉಪಸ್ಥಿತರಿದ್ದರು.

# ಕನ್ನೇರಿ ಸ್ವಾಮೀಜಿಯ ವಿರುದ್ಧ ಸುಮೋಟೊ ಪ್ರಕರಣ ದಾಖಲಿಸಿ

▶▶ಮೊದಲನೇ ಪುಟದಿಂದ

ಮತ್ತೆ ಪ್ರಚೋದನಕಾರಿ ಹೇಳಿಕೆಗಳನ್ನು ನೀಡಿದ್ದಾರೆ ಎಂದು ಆರೋಪಿಸಲಾಗಿದೆ.

"ಹಿಂದೂ ಸಮಾವೇಶದಲ್ಲಿ ಬೇರೆ ಧರ್ಮದ ವಿರುದ್ಧ ಜನರನ್ನು ಪ್ರಚೋದಿಸುವ ರೀತಿಯಲ್ಲಿ ಮಾತನಾಡಲಾಗಿದೆ.

ಅಂತರಧರ್ಮೀಯ ವಿವಾಹಗಳ ವಿಚಾರವನ್ನು ಪ್ರಸ್ತಾಪಿಸಿ 'ಲವ್ ಜಿಹಾದ್' ಹೆಸರಿನಲ್ಲಿ ದ್ವೇಷದ ವಾತಾವರಣ ನಿರ್ಮಿಸುವ ಪ್ರಯತ್ನ ನಡೆದಿದೆ" ಎಂದು ಪ್ರಕಟಣೆಯಲ್ಲಿ ದೂರಲಾಗಿದೆ.

ಇದೇ ವೇಳೆ, ಜಾನಪದ ತಜ್ಞೆ ಹಾಗೂ ಬಸವಾನುಯಾಯಿ ಮೀನಾಕ್ಷಿ ಬಾಳಿ ಅವರ ಹೆಸರನ್ನು ಅವಹೇಳನಕಾರಿ ರೀತಿಯಲ್ಲಿ ಉಲ್ಲೇಖಿಸಿ ಸಾರ್ವಜನಿಕವಾಗಿ ಮಾನಹಾನಿ ಮಾಡಿದ್ದಾರೆ ಎಂದು ಸಂಘಟನೆ ಆರೋಪಿಸಿದೆ.

*ನಮ್ಮ ಎಚ್ಚರಿಕೆಯನ್ನು ಜಿಲ್ಲಾಡಳಿತ ನಿರ್ಲಕ್ಷಿಸಿತು*

"ಕನ್ನೇರಿ ಸ್ವಾಮೀಜಿ ಗದಗ ಜಿಲ್ಲೆಗೆ ಬರುವ ಎರಡು ದಿನಗಳ ಮುಂಚೆಯೇ 'ಸಮಾನತೆಗಾಗಿ ನಾವು' ವೇದಿಕೆಯ ವತಿಯಿಂದ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಮನವಿ ಸಲ್ಲಿಸಿ, ಅವರ ಪ್ರವೇಶಕ್ಕೆ ನಿರ್ಬಂಧ ಹೇರಬೇಕೆಂದು ಒತ್ತಾಯಿಸಿದ್ದೆವು. ಆದರೆ ಜಿಲ್ಲಾಡಳಿತ ಅದನ್ನು ಗಂಭೀರವಾಗಿ ಪರಿಗಣಿಸಲಿಲ್ಲ" ಎಂದು ಅಸಮಾಧಾನ ವ್ಯಕ್ತಪಡಿಸಲಾಗಿದೆ.

ನಗರದ ಗಾಂಧಿ ವೃತ್ತದಲ್ಲಿ ನಡೆದ "ಸಾಮೂಹಿಕ ವಚನ ಪಠಣ ಹಾಗೂ ಸಂವಿಧಾನದ ಸಮಾನತೆಯ ಉದ್ಘೋಷ" ಕಾರ್ಯಕ್ರಮದ ಕುರಿತು ಕನ್ನೇರಿ ಸ್ವಾಮೀಜಿಗಳು ಮಾಡಿರುವ ಆರೋಪಗಳನ್ನು ಕೂಡ ಸಂಘಟನೆ ತಳ್ಳಿಹಾಕಿದೆ.

"ಆ ಕಾರ್ಯಕ್ರಮಕ್ಕೆ ನರೇಗಾ ಕಾರ್ಮಿಕರನ್ನು ಕರೆತಂದಿದ್ದಾರೆ ಎಂಬ ಆರೋಪವನ್ನು ಅವರು ಸಾಬೀತುಪಡಿಸಬೇಕು. ಇಲ್ಲವಾದರೆ 'ಸಮಾನತೆಗಾಗಿ ನಾವು' ವೇದಿಕೆಗೆ ಸಾರ್ವಜನಿಕವಾಗಿ ಕ್ಷಮೆಯಾಚಿಸಬೇಕು" ಎಂದು ಒತ್ತಾಯಿಸಲಾಗಿದೆ.

# ಮಾಜಿ ಶಾಸಕ ದೊಡ್ಡಮನಿ ಅವರ ಜನ್ಮದಿನ: ರೋಗಿಗಳಿಗೆ ಹಾಲು-ಹಣ್ಣು ವಿತರಣೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಅವರ ಅವಧಿಯಲ್ಲಿ ಶಿರಹಟ್ಟಿ ಮೀಸಲು ಮತಕ್ಷೇತ್ರದಲ್ಲಿ ₹3500 ಕೋಟಿಗೂ ಅಧಿಕ ಅಭಿವೃದ್ಧಿ ಕಾರ್ಯಗಳು ನಡೆದಿವೆ ಎಂದು ಡಿಕೆ ಶಿವಕುಮಾರ್ ಅಭಿಮಾನಿ ಬಳಗದ ಜಿಲ್ಲಾ ಕಾರ್ಯಾಧ್ಯಕ್ಷ ಮಹಾಂತೇಶ ದಶಮನಿ ಹೇಳಿದರು.

ಸೋಮವಾರ ಶಿರಹಟ್ಟಿ ತಾಲೂಕು ಆಸ್ಪತ್ರೆಯಲ್ಲಿ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಅವರ ಜನ್ಮದಿನದ ಅಂಗವಾಗಿ ರೋಗಿಗಳಿಗೆ ಹಾಲು ಮತ್ತು ಹಣ್ಣು ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಶಿರಹಟ್ಟಿ, ಮುಂಡರಗಿ ಹಾಗೂ ಲಕ್ಷ್ಮೇಶ್ವರ ತಾಲೂಕುಗಳಲ್ಲಿ ರೈತರಿಗೆ ಅನುಕೂಲವಾಗುವಂತೆ ಅನೇಕ ಚೆಕ್‌ಡ್ಯಾಂಗಳನ್ನು ನಿರ್ಮಿಸಲಾಗಿದೆ. ಅವುಗಳಿಂದ ರೈತರ ಬೋರ್‌ವೆಲ್‌ಗಳ ಮರುಪೂರಣಕ್ಕೆ ನೆರವಾಗಿದೆ" ಎಂದು ಹೇಳಿದರು.



"ಕ್ಷೇತ್ರದಲ್ಲಿ ಮೂಲಸೌಕರ್ಯ, ಶಾಲಾ–ಕಾಲೇಜು, ವಸತಿ ಶಾಲೆ ಹಾಗೂ ವಿದ್ಯಾರ್ಥಿ ನಿಲಯಗಳ ನಿರ್ಮಾಣ ಸೇರಿದಂತೆ ಅನೇಕ ಅಭಿವೃದ್ಧಿ ಕಾರ್ಯಗಳ ಮೂಲಕ ಕ್ಷೇತ್ರವನ್ನು ಅಭಿವೃದ್ಧಿಯ ಪಥದತ್ತ ಕೊಂಡೊಯ್ಯಲಾಗಿದೆ" ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಮೀದ ಸನದಿ, ಬಸವರಾಜ ಕಂಬಳಿ, ಈರಣ್ಣ ಕೋಟಿ, ಫಕ್ಕೀರೇಶ ಬಕ್ಕಸದ, ಬಸವರಾಜ ಗಾಮನಗಟ್ಟಿ, ಫಕ್ಕೀರೇಶ ಮಡ್ಡಿ, ಮುಸ್ತಾಕ್ ಅತ್ತಾರ, ಸಮ್ಮದ ಧಾಳಾಯತ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಧರ್ಮ ಒಡೆಯುವ ಶಕ್ತಿಗಳ ವಿರುದ್ಧ ಹಿಂದೂ ಸಮಾಜ ಜಾಗೃತವಾಗಲಿ

▸▸ ಮೊದಲನೇ ಪುಟದಿಂದ

ಗಡಿಭಾಗದಲ್ಲಿ ಉದ್ವಿಗ್ನ ಪರಿಸ್ಥಿತಿ ಇದ್ದಾಗಲೂ ರೈತ ಹೊಲದಲ್ಲಿ ದುಡಿಯುತ್ತಿದ್ದ. ಅದರಿಂದಲೇ ದೇಶಕ್ಕೆ ಆಹಾರದ ಕೊರತೆ ಉಂಟಾಗಲಿಲ್ಲ. ಆದರೆ ಇಂದು ರೈತನ ಬದುಕು ಸಂಕಷ್ಟಕ್ಕೆ ಸಿಲುಕಿದೆ" ಎಂದು ಹೇಳಿದರು.

"ಪೆಟ್ರೋಲ್ ಬೆಲೆ ಏರಿಕೆಯಾದಾಗ ಮೌನವಾಗಿರುವ ಸಮಾಜ, ತರಕಾರಿ ಅಥವಾ ಈರುಳ್ಳಿ ಬೆಲೆ ಏರಿದರೆ ಮಾತ್ರ ಚರ್ಚೆ ಮಾಡುತ್ತದೆ. ರೈತರು ತಮ್ಮ ಹಕ್ಕುಗಳ ಬಗ್ಗೆ ಇನ್ನಷ್ಟು ಜಾಗೃತರಾಗಬೇಕು" ಎಂದು ಕರೆ ನೀಡಿದರು.

ಸಮಾವೇಶವನ್ನು ಮುಂಡರಗಿಯ ಅನ್ನದಾನೀಶ್ವರ ಸ್ವಾಮೀಜಿ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಹರಿಹರ ಪಂಚಮಸಾಲಿ ಪೀಠದ ವಚನಾನಂದ ಸ್ವಾಮೀಜಿ, ಹರಿದ್ವಾರದಿಂದ ಆಗಮಿಸಿದ್ದ ಅಮೃತಾನಂದಜಿ ಮಹಾರಾಜ್ ಸೇರಿದಂತೆ ನೂರಕ್ಕೂ ಹೆಚ್ಚು ಮಠಾಧೀಶರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ನರಗುಂದ ಶಾಸಕ ಸಿ.ಸಿ. ಪಾಟೀಲ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಬಿಜೆಪಿ ಜಿಲ್ಲಾಧ್ಯಕ್ಷ ರಾಜು ಕುರುಡಗಿ, ಎಚ್.ಎಸ್. ಶಿವನಗೌಡ್ರ, ರವಿ ದಂಡಿನ, ಕಿರಣ ಬೂಮಾ, ವೆಂಕಟೇಶ ಕುಲಕರ್ಣಿ ಸೇರಿದಂತೆ ಹಲವರು ಭಾಗವಹಿಸಿದ್ದರು.

ಈ ವೇಳೆ ಡಾ. ಡಿ.ಎ. ಉಪಾಧ್ಯಾಯ ರಚಿಸಿರುವ "ಬಸವ ಶೈವದಲ್ಲಿ ಹಿಂದುತ್ವ" ಸಂಪುಟ-2 ಹಾಗೂ ಡಾ. ಸಿ. ಶಿವಕುಮಾರ ಸ್ವಾಮೀಜಿ ರಚಿಸಿರುವ "ವಚನಾನುಸಂಧಾನ" ಗ್ರಂಥಗಳನ್ನು ಬಿಡುಗಡೆಗೊಳಿಸಲಾಯಿತು. ಒಕ್ಕೂಟದ ಅಧ್ಯಕ್ಷ ವಸಂತಗೌಡ ಪೊಲೀಸಪಾಟೀಲ ಸ್ವಾಗತಿಸಿದರು. ಚಂದ್ರು ಬಾಳಿಹಳ್ಳಿಮಠ ಪ್ರಾಸ್ತಾವಿಕವಾಗಿ ಮಾತನಾಡಿದರು.

### ಮೂಲಭೂತ ಸೌಲಭ್ಯಗಳಿಗೆ ಆಗ್ರಹಿಸಿ ಪುರಸಭೆ ಎದುರು ಕೌಡೇಶ್ವರಿ ನಗರ ನಿವಾಸಿಗಳ ಆಕ್ರೋಶ

# ರಸ್ತೆ-ಚರಂಡಿ ಇಲ್ಲದೆ ಕಂಗಾಲಾದ ಜನಜೀವನ!

■ ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ

ಪಟ್ಟಣದ ಕೌಡೇಶ್ವರಿ ನಗರದ ನಿವಾಸಿಗಳು ರಸ್ತೆ, ಚರಂಡಿ ಹಾಗೂ ಕುಡಿಯುವ ನೀರಿನಂತಹ ಮೂಲಭೂತ ಸೌಲಭ್ಯಗಳನ್ನು ಒದಗಿಸುವಂತೆ ಆಗ್ರಹಿಸಿ ಸೋಮವಾರ ಮಳೆಯ ನಡುವೆಯೇ ಪುರಸಭೆಗೆ ದೌಡಾಯಿಸಿ ಪ್ರತಿಭಟನೆ ನಡೆಸಿದರು.

ಪುರಸಭೆ ಎದುರು ಜಮಾಯಿಸಿದ ನಿವಾಸಿಗಳು ಅಧಿಕಾರಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿ, "ಹಲವು ವರ್ಷಗಳಿಂದ ಮೂಲಸೌಕರ್ಯಗಳಿಲ್ಲದೆ ನರಕಯಾತನೆ ಅನುಭವಿಸುತ್ತಿದ್ದೇವೆ" ಎಂದು ದೂರಿದರು.

"ನಮ್ಮ ವಾರ್ಡಿನಲ್ಲಿ ರಸ್ತೆ ಹಾಗೂ ಚರಂಡಿ ವ್ಯವಸ್ಥೆ ಇಲ್ಲದ ಕಾರಣ ಮಳೆ ಬಂದಾಗ ರಸ್ತೆಗಳು ಸಂಪೂರ್ಣ ಕೆಸರಿನ ಗದ್ದೆಯಾಗುತ್ತವೆ. ಚರಂಡಿ ಇಲ್ಲದೆ ಮಳೆನೀರು ಮನೆಗಳ ಮುಂದೆ ನಿಂತುಕೊಳ್ಳುತ್ತದೆ. ಮಕ್ಕಳು ಹಾಗೂ ವೃದ್ಧರು ಸಂಚಾರ ನಡೆಸುವುದೇ ದುಸ್ತರವಾಗಿದೆ" ಎಂದು ನಿವಾಸಿಗಳು ಅಳಲು ತೋಡಿಕೊಂಡರು.

"ನಾವು ಪ್ರಥಮ ವಾರ್ಡಿನ ನಿವಾಸಿಗಳಾಗಿದ್ದರೂ ಮತದಾನ ಮಾತ್ರ 8ನೇ ವಾರ್ಡಿಗೆ ಸೇರಿದೆ. ಈ ಕಾರಣದಿಂದ ಜನಪ್ರತಿನಿಧಿಗಳು ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿದ್ದು, ನಮ್ಮ ಪ್ರದೇಶದ ಅಭಿವೃದ್ಧಿ ಮರೀಚಿಕೆಯಾಗಿಬಿಟ್ಟಿದೆ" ಎಂದು ಆರೋಪಿಸಿದರು.



ಈ ಕುರಿತು ಹಲವು ಬಾರಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನೆ ವೇಳೆ ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗುಡದಾರಿ, ಪುರಸಭೆ ಮಾಜಿ ಅಧ್ಯಕ್ಷ ಎಂ.ಆರ್. ಪಾಟೀಲ ಹಾಗೂ ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್ ನಿವಾಸಿಗಳೊಂದಿಗೆ ಮಾತುಕತೆ ನಡೆಸಿ ಸಮಸ್ಯೆಗಳನ್ನು ಆಲಿಸಿದರು.

"ರಸ್ತೆ, ಚರಂಡಿ ಹಾಗೂ ಇತರೆ ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗೆ ಆದ್ಯತೆ ನೀಡಿ ಅಗತ್ಯ ಕ್ರಮ ಕೈಗೊಳ್ಳಲಾಗುವುದು" ಎಂದು ಮುಖ್ಯಾಧಿಕಾರಿ ಭರವಸೆ ನೀಡಿದರು.

> "ಮೂಲಭೂತ ಸೌಲಭ್ಯಗಳಿಲ್ಲದೆ ಬದುಕು ಸಾಗಿಸುವ ಪರಿಸ್ಥಿತಿ ನಿರ್ಮಾಣವಾಗಿದ್ದು, ಅಧಿಕಾರಿಗಳು ತಕ್ಷಣ ಸ್ಪಂದಿಸಬೇಕು."
> – **ಕೌಡೇಶ್ವರಿ ನಗರ ನಿವಾಸಿಗಳು**

ಮುಖ್ಯಾಧಿಕಾರಿಗಳ ಭರವಸೆಯ ಬಳಿಕ ಪ್ರತಿಭಟನೆಯನ್ನು ಹಿಂತೆಗೆದುಕೊಂಡ ನಿವಾಸಿಗಳು, "ಶೀಘ್ರದಲ್ಲೇ ಕಾಮಗಾರಿ ಆರಂಭವಾಗದಿದ್ದರೆ ಮತ್ತೆ ಉಗ್ರ ಹೋರಾಟ ನಡೆಸಲಾಗುವುದು" ಎಂದು ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಹನಮಂತಪ್ಪ ಬಾಲೆಹೊಸೂರ, ನಾಗಪ್ಪ ಪೂಜಾರ, ಲಕ್ಷ್ಮಣ ಮುಳಗುಂದ, ಮಂಜಪ್ಪ ಪಡಗೇರಿ, ಬೀರಪ್ಪ ಪೂಜಾರ, ಗಂಗಪ್ಪ ಗೊಜಗೊಜಿ, ಮಲ್ಲಪ್ಪ ಬನ್ನಿ, ಬಸಣ್ಣ ಉಳ್ಳಟ್ಟಿ, ರೇಣವ್ವ ಗೊರವರ, ಲಕ್ಷ್ಮವ್ವ ಕೋರಿ, ರೇಣವ್ವ ಪೂಜಾರ, ಗಂಗಮ್ಮ ಗೊಜಗೊಜಿ, ಸಂಕವ್ವ ಮುಳಗುಂದ, ಶಿವಲೀಲಾ ಬನ್ನಿ, ರೇಣವ್ವ ಕೋರಿ, ಜಯಮ್ಮ ಕುಷ್ಟಗಿ ಹಾಗೂ ಗೌರಮ್ಮ ತಹಶೀಲ್ದಾರ ಸೇರಿದಂತೆ ಕೌಡೇಶ್ವರಿ ನಗರದ ಅನೇಕ ನಿವಾಸಿಗಳು ಭಾಗವಹಿಸಿದ್ದರು.

### ರೋಟರಿ ಗದಗ ಸೆಂಟ್ರಲ್ ವತಿಯಿಂದ ವಿಶೇಷ ಆಚರಣೆ

# ಸೇವೆ, ಸಂಭ್ರಮಕ್ಕೆ ಸಾಕ್ಷಿಯಾದ ರೋಟರಿ ಚಾರ್ಟರ್ ಡೇ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ರೋಟರಿ ಗದಗ ಸೆಂಟ್ರಲ್ ವತಿಯಿಂದ ಸೇವಾಲಾಲ ನಗರದ ರೋಟರಿ ಭವನದಲ್ಲಿ ಚಾರ್ಟರ್ ಡೇವನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ರೋಟರಿ ಅಧ್ಯಕ್ಷ ಚೇತನ ಅಂಗಡಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಶಿರಸಿಯ ಖ್ಯಾತ ಮಕ್ಕಳ ತಜ್ಞ ವೈದ್ಯ ರೊ. ಡಾ. ದಿನೇಶ ಆರ್. ಹೆಗಡೆ ಹಾಗೂ ರೋಟರಿ ರೆವಿನ್ಯೂ ಡಿಸ್ಟ್ರಿಕ್ಟ್ 3170ರ ಅಸಿಸ್ಟೆಂಟ್ ಗವರ್ನರ್ ವಿ.ಕೆ. ಗುರುಮಠ ಭಾಗವಹಿಸಿದ್ದರು.

ಕೇಕ್ ಕತ್ತರಿಸುವ ಮೂಲಕ ಚಾರ್ಟರ್ ಡೇ ಆಚರಣೆಗೆ ಚಾಲನೆ ನೀಡಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಡಾ. ದಿನೇಶ ಹೆಗಡೆ, "ರೋಟರಿ ಕೇವಲ ಸಂಘಟನೆಯಲ್ಲ, ಅದು ಸೇವೆಯ ಮೌಲ್ಯಗಳನ್ನು ಸಮಾಜಕ್ಕೆ ತಲುಪಿಸುವ ವೇದಿಕೆ" ಎಂದು ಹೇಳಿದರು.

ವೈದ್ಯರಾಗಿ ಸೇವೆ ಸಲ್ಲಿಸುವ ಸಂದರ್ಭದಲ್ಲಿ ಎದುರಾದ ಅನೇಕ ಆಕಸ್ಮಿಕ ಸಂದರ್ಭಗಳನ್ನು ಸಮರ್ಥವಾಗಿ ನಿಭಾಯಿಸಿ, ರೋಟ-ರಿಯ ಸೇವಾ ಮನೋಭಾವವನ್ನು



ಸಾರ್ಥಕಗೊಳಿಸಿದ ಅನುಭವಗಳನ್ನು ಅವರು ಹಂಚಿಕೊಂಡರು.

ಅಸಿಸ್ಟೆಂಟ್ ಗವರ್ನರ್ ವಿ.ಕೆ. ಗುರುಮಠ ಹಾಗೂ ಅಧ್ಯಕ್ಷ ಚೇತನ ಅಂಗಡಿ ಮಾತನಾಡಿ, ಚಾರ್ಟರ್ ಡೇ ಆಚರಣೆಯ ಮಹತ್ವ ಹಾಗೂ ರೋಟರಿಯ ಸೇವಾ ಚಟುವಟಿಕೆಗಳ ಕುರಿತು ವಿವರಿಸಿದರು.

ಕಾರ್ಯಕ್ರಮದಲ್ಲಿ ರೋಟರಿ ಪರಿವಾರದ ದಂಪತಿಗಳಿಗಾಗಿ ಫನ್ ಗೇಮ್ಸ್ ಆಯೋಜಿಸಲಾಗಿದ್ದು, ವಿಜೇತರಿಗೆ ಬಹುಮಾನ ವಿತರಿಸಲಾಯಿತು. ನಂತರ ನಡೆದ ಮಿಮಿಕ್ರಿ ಶೋ ಎಲ್ಲರ ಮನರಂಜನೆಗೆ ಕಾರಣವಾಯಿತು.

> "ರೋಟರಿ ಎಂದರೆ ಸೇವೆಯ ಸಂಸ್ಕೃತಿ, ಸಮಾಜದ ಸಂಕಷ್ಟದ ಕ್ಷಣದಲ್ಲಿ ಸ್ಪಂದಿಸುವ ಮನೋಭಾವವೇ ಅದರ ನಿಜವಾದ ಶಕ್ತಿ."
> – **ಡಾ. ದಿನೇಶ ಆರ್. ಹೆಗಡೆ,** ಮಕ್ಕಳ ತಜ್ಞ ವೈದ್ಯರು

ಕಾರ್ಯಕ್ರಮದಲ್ಲಿ ಕಾರ್ಯದರ್ಶಿ ರಾಜು ಉಮ್ನಾಬಾದಿ, ಖಜಾಂಚಿ ಡಾ. ಪ್ರಭು ಗಂಜಿಹಾಳ, ಮಾಜಿ ಅಸಿಸ್ಟೆಂಟ್ ಗವರ್ನರ್ ಎಂ.ಸಿ. ಐಲಿ, ಸುರೇಶ ಅಬ್ಬಿಗೇರಿ, ಲಿಂಗರಾಜು ಗುಡಿಮನಿ, ವಿಜಯಕುಮಾರ ಹಿರೇಮಠ, ಶ್ರೀಕಾಂತ ಲಕ್ಕುಂಡಿ, ಮಂಜುನಾಥ ಬೇಲೇರಿ, ಎಸ್.ಐ. ಅಣ್ಣಿಗೇರಿ, ಪರಶುರಾಮ ನಾಯ್ಕರ್, ರಾಜಣ್ಣ ಮುಧೋಳ, ರಾಜು ಕುರಡಗಿ, ಪ್ರಕಾಶ ಉಗಲಾಟ, ಆರ್.ಬಿ. ದಾನಪ್ಪಗೌಡ್ರ, ಚಂದ್ರಗೌಡ ಹಿರೇಗೌಡರ, ಶಶಿಧರ ದಿಂಡೂರ, ಮಲ್ಲಿಕಾರ್ಜುನ ಚಂದಪ್ಪನವರ, ಮಂಜುನಾಥ ಕಬಾಡಿ, ಮುರಗೇಶ ಎಂ. ಬಡ್ನಿ, ಕೆ.ವಿ. ಪಾಟೀಲ ಸೇರಿದಂತೆ ರೋಟರಿ ಸದಸ್ಯರು ಹಾಗೂ ಪರಿವಾರದವರು ಉಪಸ್ಥಿತರಿದ್ದರು.

### ವಿಶ್ವೇಶ್ವರಯ್ಯ ನಗರದಲ್ಲಿ ಮುತ್ತೈದೆಯರ ಉಡಿ ತುಂಬುವ ಸಂಭ್ರಮ-ಭಕ್ತಿಭಾವದಿಂದ ನಡೆದ ವಿಶೇಷ ಪೂಜೆ

# ಅಧಿಕ ಜೇಷ್ಠ ಮಾಸದ ಪುಣ್ಯ ಸಡಗರ

■ ವಿಜಯಸಾಕ್ಷಿ ಸುದ್ದಿ, ಗದಗ

ಮೂರು ವರ್ಷಕ್ಕೊಮ್ಮೆ ಬರುವ ಪುಣ್ಯದಾಯಕ ಅಧಿಕ ಜೇಷ್ಠ ಮಾಸದ ಅಂಗವಾಗಿ ಗದುಗಿನ ವಿಶ್ವೇಶ್ವರಯ್ಯ ನಗರದ ಶ್ರೀ ವಿಘ್ನೇಶ್ವರ ದೇವಸ್ಥಾನದಲ್ಲಿ ಶನಿವಾರ ಭಕ್ತಿ, ಸಂಪ್ರದಾಯ ಮತ್ತು ಸಡಗರದ ವಾತಾವರಣ ನಿರ್ಮಾಣವಾಗಿತ್ತು. ಜೈ ಹನುಮಾನ ಮಹಿಳಾ ಬಳಗ ಹಾಗೂ ವಿಘ್ನೇಶ್ವರ ಸೇವಾ ಸಮಿತಿಯ ಸಂಯುಕ್ತ ಆಶ್ರಯದಲ್ಲಿ ಮುತ್ತೈದೆಯರಿಗೆ ವಿಶೇಷ ಉಡಿ ತುಂಬುವ ಕಾರ್ಯಕ್ರಮ ಶ್ರದ್ಧಾಭಕ್ತಿಯಿಂದ ನೆರವೇರಿತು.

ಬೆಳಗ್ಗಿನಿಂದಲೇ ದೇವಸ್ಥಾನ ದಲ್ಲಿ ವಿಶೇಷ ಅಲಂಕಾರ, ಪೂಜೆ ಹಾಗೂ ಧಾರ್ಮಿಕ ವಿಧಿವಿಧಾನಗಳು ನಡೆದವು. ದೇವರ ಸನ್ನಿಧಿಯಲ್ಲಿ ಮಹಿಳೆಯರು ಮಂಗಳದ್ರವ್ಯಗಳೊಂದಿಗೆ ಪರಸ್ಪರ ಉಡಿ ತುಂಬಿ ಶುಭ ಹಾರೈಸಿದ ದೃಶ್ಯ ಎಲ್ಲರ ಗಮನ ಸೆಳೆಯಿತು.

ಈ ವೇಳೆ ಮಾತನಾಡಿದ ದೇವಸ್ಥಾನದ ಅರ್ಚಕ ಬಸಯ್ಯ ಹಿರೇಮಠ, "ಅಧಿಕ ಜೇಷ್ಠ ಮಾಸವು ಸ್ವಯಂ ಭಗವಾನ್ ವಿಷ್ಣುವಿಗೆ ಅರ್ಪಿತವಾದ



ಪವಿತ್ರ ಮಾಸ. ಈ ತಿಂಗಳಲ್ಲಿ ಮಾಡುವ ಪೂಜೆ, ಜಪ-ತಪ, ದಾನ ಹಾಗೂ ಧಾರ್ಮಿಕ ಕಾರ್ಯಗಳಿಗೆ ಹಲವು ಪಟ್ಟು ಹೆಚ್ಚಿನ ಫಲ ದೊರೆಯುತ್ತದೆ" ಎಂದು ಹೇಳಿದರು.

"ಮುತ್ತೈದೆಯರಿಗೆ ಉಡಿ ತುಂಬುವುದರಿಂದ ಕುಟುಂಬದಲ್ಲಿ ಸುಖ, ಶಾಂತಿ ಹಾಗೂ ಸಮೃದ್ಧಿ ನೆಲೆಸುತ್ತದೆ ಎಂಬ ನಂಬಿಕೆ ಇದೆ. ಲಕ್ಷ್ಮೀ-ವಿಷ್ಣು ಪೂಜೆ, ಸತ್ಯನಾರಾಯಣ ವ್ರತ ಹಾಗೂ ದಾನಗಳಿಗೆ ಈ ಮಾಸದಲ್ಲಿ ವಿಶೇಷ ಮಹತ್ವವಿದೆ" ಎಂದು ತಿಳಿಸಿದರು.

> "ಅಧಿಕ ಜೇಷ್ಠ ಮಾಸದಲ್ಲಿ ಮಾಡುವ ಧಾರ್ಮಿಕ ಕಾರ್ಯಗಳಿಗೆ ಸಾಮಾನ್ಯ ತಿಂಗಳಿಗಿಂತ ಹಲವು ಪಟ್ಟು ಹೆಚ್ಚಿನ ಪುಣ್ಯ ಫಲ ದೊರೆಯುತ್ತದೆ."
> – **ಬಸಯ್ಯ ಹಿರೇಮಠ,** ಅರ್ಚಕರು

ಜೈ ಹನುಮಾನ ಮಹಿಳಾ ಬಳಗದ ಸುರೇಖಾ ಇನಾಮತಿ, ಗಿರಿಜಾ ಇಟಗಿ, ಶ್ರೀದೇವಿ ಹೆಗಡೆಕಟ್ಟಿ, ಶ್ರೀದೇವಿ ಹಿರೇಮಠ, ನಿರ್ಮಲಾ ಬೆಂತೂರ, ಬಸಮ್ಮ ಹರ್ತಿ, ಸುಮಲತಾ ಕೊಟ್ಟೂರಶೆಟ್ಟರ ಹಾಗೂ ಜಯಶ್ರೀ ಶಿವಸಿಂಪಿಗೇರ ಅವರ ನೇತೃತ್ವದಲ್ಲಿ ಕಾರ್ಯಕ್ರಮ ನಡೆಯಿತು.

ವಿಶ್ವೇಶ್ವರಯ್ಯ ನಗರದ ನೂರಾರು ಮಹಿಳೆಯರು ಸಾಂಪ್ರದಾಯಿಕ ಉಡುಗೆ-ತೊಡುಗೆಯಲ್ಲಿ ಭಾಗವಹಿಸಿ ತೀರ್ಥ-ಪ್ರಸಾದ ಸ್ವೀಕರಿಸಿದರು.

ಕಾರ್ಯಕ್ರಮದಲ್ಲಿ ವಿಘ್ನೇಶ್ವರ ಸೇವಾ ಸಮಿತಿಯ ಅಧ್ಯಕ್ಷ ರವೀಂದ್ರ ರೆಡ್ಡಿ, ಕಾರ್ಯದರ್ಶಿ ಪ್ರಕಾಶ ಬೆಂತೂರ, ರವಿ ಬೆಂತೂರ, ಆಂಜನೇಯ ಕಟಗಿ, ಪ್ರೊ. ಸಿ. ಲಿಂಗಾರೆಡ್ಡಿ, ರಾಜಶೇಖರ ಹಿರೇಮಠ, ಸತೀಶ ಹೆಗಡೆಕಟ್ಟಿ, ಗೌಡಪ್ಪ ಬೊಮ್ಮಕ್ಕನವರ, ಸಂದೇಶ ಪಾಟೀಲ, ಸೋಮು ಲಮಾಣಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಎತ್ತಿನಗಾಡಿಯಲ್ಲಿ ಮಕ್ಕಳ ಶಾಲಾ ಸಂಭ್ರಮ!

▸▸ ಮೊದಲನೇ ಪುಟದಿಂದ

ನಿವೃತ್ತ ಉಪನಿರ್ದೇಶಕ ಎ.ಎನ್. ನಾಗರಳ್ಳಿ ಮಾತನಾಡಿ, "ಶಿಕ್ಷಕರು ಬದ್ಧತೆಯಿಂದ ಪಾಠ ಮಾಡಿದರೆ ಮಕ್ಕಳು ಖಂಡಿತ ಕಲಿಯುತ್ತಾರೆ. ಮಕ್ಕಳಲ್ಲಿ ಜ್ಞಾನ ಮತ್ತು ಮೌಲ್ಯಗಳನ್ನು ಬೆಳೆಸುವ ಜವಾಬ್ದಾರಿ ಶಿಕ್ಷಕರ ಮೇಲಿದೆ" ಎಂದರು. ಅತಿಥಿಯಾಗಿ ಭಾಗವಹಿಸಿದ್ದ ಎಚ್.ಕೆ. ಬೂಮ್ಮಕ್ಕನವರ ಮಾತನಾಡಿ, "ಖಾಸಗಿ ಶಾಲೆಗಳ ಹೆಚ್ಚಳದ ನಡುವೆಯೂ ಸರ್ಕಾರಿ ಶಾಲೆಗಳ ಅಸ್ತಿತ್ವ ಉಳಿಯಬೇಕು. ಪಾಲಕರು, ಹಳೆಯ ವಿದ್ಯಾರ್ಥಿಗಳು ಹಾಗೂ ಸಮಾಜದ ಎಲ್ಲ ವರ್ಗದವರು ಕೈಜೋಡಿಸಬೇಕು" ಎಂದು ಹೇಳಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ (ಅಭಿವೃದ್ಧಿ) ಕೆ.ಡಿ. ಬಡಿಗೇರ ಮಾತನಾಡಿ, "ಒಂದು ಮಗುವೂ ಸರ್ಕಾರಿ ಶಾಲೆಯಿಂದ ಖಾಸಗಿ ಶಾಲೆಗೆ ಹೋಗದಂತೆ ನೋಡಿಕೊಳ್ಳುವ ಜವಾಬ್ದಾರಿ ಶಿಕ್ಷಕರ ಮೇಲಿದೆ" ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಜೆ.ಎ. ಭಾವಿಕಟ್ಟಿ, ರವಿ ಪ್ರಕಾಶ, ಬಿ.ಎಫ್. ಪೂಜಾರ, ವಿ.ಎಂ. ಹಿರೇಮಠ, ರವಿರಾಜ ಪವಾರ, ಶ್ರೀಮತಿ ಗೀತಾ ಕುಲಕರ್ಣಿ, ಎಂ.ಡಿ. ಹೊಸಮನಿ, ವಿ.ಎಫ್. ಕಲಕುಂಬಿ, ಶಂಕರ ಹಡಗಲಿ, ಶ್ರೀಮತಿ ಶೈಲಜಾ ಮಟ್ಟಿ, ಡಾ. ಬಸವರಾಜ ವಿ.ಎಚ್. ಬಳ್ಳಾರಿ, ಎಚ್.ವೈ. ಹೊನ್ನಿನಾಯ್ಕರ, ಸೋಮರೆಡ್ಡಿ ರಾಮೇನಳ್ಳಿ, ಶಿವಾನಂದ ಕರಿಗಾರ, ಫಕಿರೆಡ್ಡಿ ಮಾಡಳ್ಳಿ, ತಾಜುದ್ದೀನ್ ಓಲೇಕಾರ, ಶ್ರೀಮತಿ ರೇಖಾ ತಿಮ್ಮನಗೌಡ್ರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಎಪಿಸಿಒ ಶಿವಕುಮಾರ ಕುರಿ ಸ್ವಾಗತಿಸಿದರು. ವಿ.ವಿ. ನಡುವಿನಮನಿ ವಂದಿಸಿದರು. ಶಾಲೆಯ ಮುಖ್ಯೋಪಾಧ್ಯಾಯ ಡಿ.ಎಚ್. ಪರಂಗಿ ಕಾರ್ಯಕ್ರಮ ನಿರೂಪಿಸಿದರು.

# ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಿ

▸▸ ಮೊದಲನೇ ಪುಟದಿಂದ

ಮುಖಂಡ ನಿಂಗನಗೌಡ ಲಕ್ಕನಗೌಡ್ರ ಮಾತನಾಡಿ, "ಈ ಹಿಂದೆ ರೋಣಕ್ಕೆ ಬಂದಿದ್ದ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಇಂದಿನ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರೇ ಜಿ.ಎಸ್. ಪಾಟೀಲರಿಗೆ ಸಚಿವರಾಗುವ ಎಲ್ಲ ಅರ್ಹತೆಗಳಿವೆ ಎಂದು ಹೇಳಿದ್ದರು. ಈಗ ಆ ಮಾತನ್ನು ನಿಜ ಮಾಡುವ ಸಮಯ ಬಂದಿದೆ" ಎಂದು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಮುಖಂಡ ಸಂತೋಷ ಮಣ್ಣೊಡ್ಡರ ಉಪಸ್ಥಿತರಿದ್ದರು.

### ಬಣಜಿಗ ಸಮಾಜದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮೀಜಿ ಕರೆ

# ಸಹಾಯ ಮಾಡುವುದೇ ನಿಜವಾದ ಧರ್ಮ

■ ವಿಜಯಸಾಕ್ಷಿ ಸುದ್ದಿ, ಲಕ್ಮೇಶ್ವರ

"ಸಂಕಷ್ಟದಲ್ಲಿರುವವರಿಗೆ ನೆರವಾಗುವುದು ನಿಜವಾದ ಧರ್ಮ. ಎಲ್ಲರ ಹಿತವನ್ನು ಬಯಸುವುದೇ ಧರ್ಮದ ನಿಜಸ್ವರೂಪ" ಎಂದು ತಾಲ್ಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಪಟ್ಟಣದ ಬಿಸಿಎನ್ ಪಾಲಿಟೆಕ್ನಿಕ್ ಕಾಲೇಜಿನ ಸಭಾಭವನದಲ್ಲಿ ಭಾನುವಾರ ತಾಲ್ಲೂಕು ಬಣಜಿಗ ಸಮಾಜ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಹಾಗೂ ಸಾಧಕರ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು.

"'ಕಾಯಕವೇ ಕೈಲಾಸ' ಎಂಬ ಬಸವಣ್ಣನವರ ವಚನವನ್ನು ಬಣಜಿಗ ಸಮಾಜ ತಮ್ಮ ಬದುಕಿನ ಮೌಲ್ಯವನ್ನಾಗಿ ಮಾಡಿಕೊಂಡಿದೆ. ವ್ಯಾಪಾರವೇ ಅವರ ಕಾಯಕವಾಗಿದ್ದು, ಶ್ರಮಪಟ್ಟು ದುಡಿದಾಗ ಮಾತ್ರ ಯಶಸ್ಸು ಸಾಧ್ಯ. ವ್ಯಾಪಾರಿ ಮನೋಭಾವದ ಜೊತೆಗೆ ದಾನ-ಧರ್ಮದ ಮನಸ್ಸು ಹೊಂದಿರುವುದು ಸಮಾಜದ ಶ್ರೇಷ್ಠತೆ" ಎಂದು ಹೇಳಿದರು.

ಪ್ರತಿಭಾವಂತ ವಿದ್ಯಾರ್ಥಿಗಳನ್ನು ಗೌರವಿಸುವುದರಿಂದ ಮಕ್ಕಳಲ್ಲಿ ಶಿಕ್ಷಣದ ಬಗ್ಗೆ ಮತ್ತಷ್ಟು ಆಸಕ್ತಿ ಮತ್ತು ಸ್ಫೂರ್ತಿ ಬೆಳೆಯುತ್ತದೆ ಎಂದು ಶ್ರೀಗಳು ತಿಳಿಸಿದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಎ. ಮುರಿಗೆಪ್ಪ ಉಪನ್ಯಾಸ ನೀಡಿ, "ಬಣಜಿಗ ಸಮಾಜ ಇಂದು ಶಿಕ್ಷಣ, ರಾಜಕೀಯ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಗಮನಾರ್ಹ ಪ್ರಗತಿ ಸಾಧಿಸಿದೆ. ಬಣಜಿಗ ಮಠಗಳು ಸಾವಿರಾರು ಮಕ್ಕಳಿಗೆ ತ್ರಿವಿಧ ದಾಸೋಹ ನೀಡುತ್ತಿರುವುದು



ಹೆಮ್ಮೆಯ ಸಂಗತಿ" ಎಂದು ಹೇಳಿದರು.

ರಾಜ್ಯದ ರಾಜಕಾರಣದಲ್ಲಿ ಬಣಜಿಗ ಸಮಾಜದ ನಾಯಕರು ತಮ್ಮದೇ ಆದ ಛಾಪು ಮೂಡಿಸಿದ್ದಾರೆ. ಸಮಾಜದ ಪ್ರಗತಿಗಾಗಿ ಎಲ್ಲರೂ ಸಣ್ಣಪುಟ್ಟ ಭಿನ್ನಾಭಿಪ್ರಾಯಗಳನ್ನು ಮರೆತು ಒಗ್ಗಟ್ಟಿನಿಂದ ಸಾಗಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ತಾಲ್ಲೂಕು ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಲೋಹಿತ ನೆಲವಗಿ ವಹಿಸಿದ್ದರು.

"ಕಳೆದ ಐದು ವರ್ಷಗಳಿಂದ ಸಮಾಜವನ್ನು ಸಂಘಟಿಸುವ ಕಾರ್ಯ ನಿರಂತರವಾಗಿ ನಡೆಯುತ್ತಿದೆ. ಸಮಾಜದ ಎಲ್ಲರೂ ಉತ್ತಮ ಸ್ಪಂದನೆ ನೀಡುತ್ತಿದ್ದು,

> "ಕಾಯಕದ ಜೊತೆ ದಾನ-ಧರ್ಮದ ಮನಸ್ಸು ಹೊಂದಿದಾಗ ಮಾತ್ರ ಸಮಾಜಕ್ಕೆ ನಿಜವಾದ ಗೌರವ ಸಿಗುತ್ತದೆ."
> – **ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮೀಜಿ**

ಮುಂದಿನ ದಿನಗಳಲ್ಲೂ ಇದೇ ರೀತಿಯ ಸಹಕಾರ ಅಗತ್ಯ" ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳನ್ನು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಮಾಜದ ಗಣ್ಯರನ್ನು ಸನ್ಮಾನಿಸಲಾಯಿತು.

ಸಮಾಜದ ಹಿರಿಯರಾದ ಬಸವರಾಜ ವಡಕಣ್ಣವರ, ಪ್ರತಿಮಾ ಮಹಾಜನಶೆಟ್ಟರ, ಲಕ್ಷ್ಮೇಶ್ವರ ತಾಲ್ಲೂಕು ಮಹಿಳಾ ಬಣಜಿಗ ಕ್ಷೇಮಾಭಿವೃದ್ಧಿ ಟ್ರಸ್ಟ್ ಅಧ್ಯಕ್ಷೆ ರತ್ನಾ ಕರ್ಕಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ರೇಖಾ ವಡಕಣ್ಣವರ ಕಾರ್ಯಕ್ರಮ ನಿರೂಪಿಸಿದರು. ಜೆ.ಎಸ್. ರಾಮಶೆಟ್ರ ಪ್ರಾಸ್ತಾವಿಕವಾಗಿ ಮಾತನಾಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka